# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –287 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:10–06–2025 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 287 | RNI No: KARKAN/2023/88462 | KA/SK/CTA-874/2024-2026 | Chitradurga | Date: 10-06-2025 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಒಳ ಮೀಸಲಾತಿ: ಸಮೀಕ್ಷಾ ಕಾರ್ಯ ಅವಧಿ ಮರು ವಿಸ್ತರಣೆ 2
ಜುಲೈ 12ರಂದು ರಾಷ್ಟ್ರೀಯ ಲೋಕ ಅದಾಲತ್: ಜಿಲ್ಲಾ ನ್ಯಾ.ರೋಣ ವಾಸುದೇವ 3
ಸಂಸ್ಕೃತ ಭಾಷೆಯನ್ನು ಕೊಲ್ಲುವುದು ಬೇಡ 4



ಸುದ್ದಿ, ಜಾಹಿರಾತಿಗೆ 9686622252


## ಸೋಲಿಲ್ಲದ ಸರದಾರ, ಹ್ಯಾಟ್ರಿಕ್ ಶಾಸಕ

# ಅಭಿವೃದ್ಧಿಗೆ ಮತ್ತೊಂದು ಹೆಸರು ರಘುಮೂರ್ತಿ



## ನವ ಚಳ್ಳಕೆರೆ ನಿರ್ಮಾತೃ ಶಾಸಕ ಟಿ.ರಘುಮೂರ್ತಿ

ಚಳ್ಳಕೆರೆ ವಿಧಾನಸಭಾ ಕ್ಷೇತ್ರದಿಂದ **ಹ್ಯಾಟ್ರಿಕ್ ಶಾಸಕ**ರಾಗಿ ಆಯ್ಕೆಯಾಗಿ ಇತಿಹಾಸ ನಿರ್ಮಿಸಿರುವ ಟಿ.ರಘುಮೂರ್ತಿ ಕ್ಷೇತ್ರದ ಅಭಿವೃದ್ಧಿಗಾಗಿ ಸರಕಾರದಿಂದ ನೂರಾರು ಕೋಟಿ ರೂ. ಅನುದಾನ ತಂದು ಚಳ್ಳಕೆರೆ ಸರ್ವಾಂಗೀಣ ಅಭಿವೃದ್ಧಿಗೆ ದುಡಿಯುತ್ತಿದ್ದಾರೆ. ಕ್ಷೇತ್ರದ ಸಮಗ್ರ ಅಭಿವೃದ್ಧಿ ಮುನ್ನೋಟದ ಕುರಿತು ಮಹತ್ವಾಕಾಂಕ್ಷೆಯ ಹೊಂದಿರುವ **ಟಿ.ರಘುಮೂರ್ತಿ** ಅವರು ಚಳ್ಳಕೆರೆಯನ್ನು ತಮ್ಮದೇ ಆದ ಅಭಿವೃದ್ಧಿ ಚಿಂತನೆ ಮೂಲಕ ಅತಿ ಹೆಚ್ಚು ಮೂಲಸೌಕರ್ಯವುಳ್ಳ ತಾಲೂಕು ಕೇಂದ್ರವಾಗಿಸಿದ್ದಾರೆ. ರಸ್ತೆ ಅಭಿವೃದ್ಧಿ, ಶೈಕ್ಷಣಿಕ ಮೂಲಸೌಕರ್ಯ, ಕುಡಿಯುವ ನೀರು, ಕೃಷಿ, ತೋಟಗಾರಿಕೆ, ನೀರಾವರಿ ಅಭಿವೃದ್ಧಿಯ ಜತೆಗೆ ಜನಸ್ನೇಹಿ ಆಡಳಿತವನ್ನು ಖಾತ್ರಿಪಡಿಸುವಲ್ಲಿ ಅವರ ಪರಿಶ್ರಮ ದೊಡ್ಡದು. ರಾಜಕೀಯ ಟೀಕೆ, ಟಿಪ್ಪಣಿಗಳಿಗೆ ಮನ್ನಣೆ ನೀಡದೇ ಅಭಿವೃದ್ಧಿಪರ ಮನಸ್ಸುಗಳನ್ನು ಪಕ್ಷಾತೀತವಾಗಿ, ಜಾತ್ಯಾತೀತವಾಗಿ ಜೊತೆಗಿಟ್ಟುಕೊಂಡು ಇಡೀ ಕ್ಷೇತ್ರಕ್ಕೆ ಅಭಿವೃದ್ಧಿಯ ಸ್ಪರ್ಶ ನೀಡಿದ ಹೆಗ್ಗಳಿಕೆ **ಟಿ.ರಘುಮೂರ್ತಿ ಅವರಿಗೆ** ಸಲ್ಲುತ್ತದೆ.

ನಮ್ಮಜನ ವಿಶೇಷ

### ಹ್ಯಾಟ್ರಿಕ್ ಶಾಸಕ ಶ್ರೀ ಟಿ.ರಘುಮೂರ್ತಿಗೆ ಜನ್ಮದಿನದ ಶುಭಾಷಯಗಳು

## ಅಭಿವೃದ್ಧಿ ಕಾರ್ಯಗಳ ವಿವರ



**42** ಕೆರೆಗಳಿಗೆ ಭದ್ರ ಮೇಲ್ದಂಡೆ ನೀರು

ಭದ್ರಾ ಮೇಲ್ದಂಡೆ ಯೋಜನೆಯಲ್ಲಿ 42 ಕೆರೆಗಳಿಗೆ ಕೆರೆ ನೀರು ತುಂಬಿಸುವ ಜೊತೆಗೆ ಭಾಗಶಃ ಪ್ರದೇಶಕ್ಕೆ ಹನಿ ನೀರಾವರಿ ಯೋಜನೆಯ ಲಾಭ ರೈತರು ಪಡೆಯಲಿದ್ದಾರೆ.



**261** ಗ್ರಾಮಗಳಿಗೆ ತುಂಗಭದ್ರಾ ಹಿನ್ನೀರು

ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿನ 261 ಗ್ರಾಮಗಳಿಗೆ ತುಂಗಭದ್ರ ಹಿನ್ನೀರು ಯೋಜನೆಯಡಿ ಕುಡಿಯುವ ನೀರಿನ ಯೋಜನೆಯ ಮಂಜೂರಾತಿ. ಕುಡಿಯುವ ನೀರಿನ ಬವಣೆಗೆ ಶಾಶ್ವತ ಪರಿಹಾರ.



**375** ಶಾಲಾ ಕಾಲೇಜುಗಳ ಕೊಠಡಿ ನಿರ್ಮಾಣ

ನಗರ ಮತ್ತು ಗ್ರಾಮೀಣ ಭಾಗದಲ್ಲಿ ಸರಕಾರಿ ಪ್ರಾಥಮಿಕ, ಪ್ರೌಢಶಾಲಾ, ಪದವಿ, ಪಿಯು ಕಾಲೇಜುಗಳ 375ಕ್ಕೂ ಹೆಚ್ಚು ನೂತನ ಕೊಠಡಿಗಳ ನಿರ್ಮಾಣ ಮಾಡಲಾಗಿದೆ.



**365** ಸಮುದಾಯ ಭವನಗಳ ನಿರ್ಮಾಣ

ವಿವಿಧ ಸಮುದಾಯಗಳಿಗೆ ಜನಸಂಖ್ಯೆ ಅನುಗುಣವಾಗಿ ನಗರ ಮತ್ತು ಗ್ರಾಮೀಣ ಭಾಗದಲ್ಲಿ 365 ಕ್ಕೂ ಹೆಚ್ಚು ಸುಸಜ್ಜಿತ, ವಿಶಾಲವಾದ ಭವನಗಳ ನಿರ್ಮಾಣ.

| | | | | | | | | |
|---|---|---|---|---|---|---|---|---|
| **100** | **30** | **06** | **11,000** | **0.25** | **90%** | **07** | **20,000** | **ಸರ್ಕಲ್ ನಿರ್ಮಾಣ** |
| ಅಡಿ ಚಳ್ಳಕೆರೆನಗರದಲ್ಲಿ ವಿಶಾಲವಾದ ಮುಖ್ಯರಸ್ತೆ ನಿರ್ಮಾಣ | ಬೆಡ್ ನಗರದಲ್ಲಿ ನೂತನ ತಾಯಿ ಮಕ್ಕಳ ಆಸ್ಪತ್ರೆ ನಿರ್ಮಾಣ | ನೂತನ ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣ | ಮನೆ ಆಶ್ರಯ, ಅಂಬೇಡ್ಕರ್, ಬಸವ ವಸತಿ, ಪಿಎಂಎವೈ ಯೋಜನೆಯಲ್ಲಿ ಮನೆಗಳ ನಿರ್ಮಾಣ | ಟಿಎಂಸಿ ನೀರು ವೇದಾವತಿಯಿಂದ ಕ್ಷೇತ್ರ ವಿವಿಧ ಬ್ಯಾರೇಜ್‌ಗಳಿಗೆ ಮೀಸಲು | ಕ್ಷೇತ್ರಾದ್ಯಂತ ಗ್ರಾಮೀಣ ಮತ್ತು ನಗರದ ಪ್ರದೇಶದಲ್ಲಿ ರಸ್ತೆ ನಿರ್ಮಾಣ | ಬ್ಯಾರೇಜ್, ಬೊಂಬೆರಹಳ್ಳಿ ಚೌಳೂರು, ಮೊದೂರು, ಗರ್ಲತ್ತು, ಪರಶುರಾಂಪುರ, ಗೋಸಿಕೆರೆ, ತೋರೆ ಬೀರನಹಳ್ಳಿಯಲ್ಲಿ ನಿರ್ಮಾಣ | ಎಕರೆ ಅಡಿಕೆ ಬ್ಯಾರೇಜ್ ನಿರ್ಮಾಣದಿಂದ 2 ಸಾವಿರ ಎಕರೆಯಿಂದ 20 ಸಾವಿರ ಎಕರೆಗೆ ಅಡಿಕೆ ಬೆಳೆ ವಿಸ್ತರಣೆ | ಮಹರ್ಷಿ ವಾಲ್ಮೀಕಿ ಸರ್ಕಲ್ ಅಂಬೇಡ್ಕರ್ ಸರ್ಕಲ್ ಜಗಜೀವನ ರಾಂ ಸರ್ಕಲ್ ಬಸವೇಶ್ವರ ಸರ್ಕಲ್ ನೆಹರು ಸರ್ಕಲ್ ಕನಕದಾಸರ ಸರ್ಕಲ್ |



ಮಿನಿ ವಿಧಾನಸೌಧದ ಕಟ್ಟಡ ನಿರ್ಮಾಣ.



ಕೆ.ಎಸ್.ಆರ್.ಟಿ.ಸಿ ಹೈಟೆಕ್ ಬಸ್ ನಿಲ್ದಾಣ.



### ಇಂಜಿನಿಯರಿಂಗ್ ಕನಸಿಗೆ ರಘುಮೂರ್ತಿ ಶಕ್ತಿ

ಚಿತ್ರದುರ್ಗ ಜಿಲ್ಲೆಯಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹೊಂದಿರುವ ಏಕೈಕ ತಾಲೂಕು ಚಳ್ಳಕೆರೆಯಾಗಿದೆ. 2021 ರಲ್ಲಿ ಆರಂಭವಾಗುವ ಜೊತೆಗೆ 80 ಜನರು ಇಂಜಿನಿಯರಿಂಗ್ ಪೂರ್ಣಗೊಳಿಸಿ 67 ವಿದ್ಯಾರ್ಥಿಗಳಿಗೆ ವಿವಿಧ ಕಂಪನಿಗಳಿಂದ ಉದ್ಯೋಗ. ಪ್ರಸ್ತುತ 504 ವಿದ್ಯಾರ್ಥಿಗಳ ಅಭ್ಯಾಸ ಮಾಡುತ್ತಿದ್ದಾರೆ.




### ಜಿಟಿಟಿಸಿ ಕಾಲೇಜು ಆರಂಭದಿಂದ ಉದ್ಯೋಗ ಗ್ಯಾರೆಂಟಿ

ಜಿಟಿಟಿಸಿ ಕಾಲೇಜು 2021 ರಲ್ಲಿ ಆರಂಭವಾಗಿ ಪ್ರಸ್ತುತ 4 ಕೋರ್ಸ್ ಸೇರಿ 486 ವಿದ್ಯಾರ್ಥಿಗಳ ಅಭ್ಯಾಸ ಮಾಡುತ್ತಿದ್ದಾರೆ. ಮೊದಲನೇ ವರ್ಷದ 68 ವಿದ್ಯಾರ್ಥಿಗಳು ಸಂಪೂರ್ಣ ಕೋರ್ಸ್ ಮುಗಿಸಿ ತೆರಳುತ್ತಿರುವ ವಿದ್ಯಾರ್ಥಿಗಳಿಗೂ ಸಹ ವಿವಿಧ ಕಂಪನಿಗಳಿಂದ ಉದ್ಯೋಗ ಬರುತ್ತಿರುವುದಕ್ಕೆ ಶಾಸಕರಿಗೆ ಅಭಿನಂದನೆ ಸಲ್ಲಿಸುತ್ತಿದ್ದಾರೆ.

### ಕಾಂಗ್ರೆಸ್ ಪಕ್ಷ ನಿಷ್ಠೆಗೆ ಹೆಸರಾದ ಟಿ.ರಘುಮೂರ್ತಿ ಕುಟುಂಬ

ಚಿತ್ರದುರ್ಗ ತಾಲೂಕಿ ಕಡಬನಕಟ್ಟೆಯ ಗ್ರಾಮದ ಟಿ.ರಘುಮೂರ್ತಿ ಅವರ ತಂದೆ ಟಿ.ತಿಪ್ಪಯ್ಯ ಅವರು ರಾಜಕೀಯ ಆರಂಭಿಸಿ ತನ್ನ ಕೊನೆಯುಸಿರು ಇರುವವರೆಗೂ ಸಹ ಕಾಂಗ್ರೆಸ್ ನಿಷ್ಠೆ ಜೊತೆ ಪಕ್ಷ ಸಂಘಟನೆಯಲ್ಲಿ ಪ್ರಮುಖ ಪಾತ್ರವಹಿಸಿದರು. ಮಾಜಿ ಸಚಿವ ದಿ.ಅಶ್ವಥ್ ರೆಡ್ಡಿ ಅವರ ಬೆಂಬಲಿಗರಾಗಿ ಗುರುತಿಸಿಕೊಂಡು ರಾಜಕೀಯ ಆರಂಭಿಸಿ ಗಾಪಂ ಅಧ್ಯಕ್ಷ, ಮಂಡಲ ಉಪಾಧ್ಯಕ್ಷ, ತಾಪಂ ಸದಸ್ಯರಾಗಿ ಕಾಂಗ್ರೆಸ್‌ಗೆ ದುಡಿದರು. ಶಾಸಕರ ಕುಟುಂಬದವರು ತಾ.ಪಂ, ಜಿ.ಪಂ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಗೆಲುವು ಸಾಧಿಸಿದರು. ಟಿ.ರಘುಮೂರ್ತಿ 2008ರಲ್ಲಿ ಸರ್ಕಾರಿ ಹುದ್ದೆಗೆ ರಾಜೀನಾಮೆ ನೀಡಿ ಕಾಂಗ್ರೆಸ್ಸಿಂದ 2008ರಲ್ಲಿ ಚಳ್ಳಕೆರೆ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಕೈ ತಪ್ಪಿತು. ಆದರು ಸಹ ವಿಚಲಿತರಾಗದೆ ಕಾಂಗ್ರೆಸ್ ನಿಷ್ಠೆ ಮೆರೆದು ಪಕ್ಷಕ್ಕಾಗಿ ದುಡಿದು ಕಾಂಗ್ರೆಸ್ ಟಿಕೆಟ್ ಪಡೆಯುವ ಮೂಲಕ 2013, 2018, 2023 ರಲ್ಲಿ ಕಾಂಗ್ರೆಸ್‌ಸಿಂದ 3 ಬಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. 2018 ರಲ್ಲಿ 2ನೇ ಬಾರಿ ಶಾಸಕರಾಗಿ ಜಿಲ್ಲೆಯಲ್ಲಿ ಕಾಂಗ್ರೆಸ್ ಬಾವುಟ ಹಾರಿಸಿದ ಏಕೈಕ ಶಾಸಕ. ಅಧಿಕಾರದ ಆಮಿಷ ಒಡ್ಡಿದರು ಸಹ ನನಗೆ ಪಕ್ಷ ಮುಖ್ಯ ಅಧಿಕಾರವಲ್ಲ ಎಂಬ ತತ್ವ ಅಳವಡಿಸಿಕೊಂಡು ದುಡಿಯುತ್ತಿದ್ದಾರೆ.

- **ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸುಮಾರು 65 ಕೋಟಿ ರೂ ಗಳ ವೆಚ್ಚದಲ್ಲಿ ವಸತಿ ಶಾಲೆಗಳ ನಿರ್ಮಾಣ.**
- **ಚಳ್ಳಕೆರೆ ನಗರದಲ್ಲಿ ಸುಮಾರು 5.00ಕೋಟಿ ರೂ.ಗಳ ಕ್ರೀಡಾಂಗಣ ಮಂಜೂರಾತಿ.**
- **ಚಳ್ಳಕೆರೆ ನಗರಕ್ಕೆ ವಾಣಿವಿಲಾಸ ಸಾಗರದಿಂದ ಕುಡಿಯುವ ನೀರಿನ ಸೌಲಭ್ಯ.**

## ಫಾಸ್ಟ್ ನ್ಯೂಸ್

### ಕರ್ನಾಟಕ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮ: ವಿವಿಧ ಯೋಜನೆಗಳಿಗೆ ಅರ್ಜಿ

» **ಚಿತ್ರದುರ್ಗ**

ಹಿಂದುಳಿದ ವರ್ಗಗಳ ಪ್ರವರ್ಗ-1ರ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರ ಆರ್ಥಿಕ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ಪಡೆಯಲು ಬಯಸುವವರಿಗೆ ಅನುಕೂಲವಾಗುವಂತೆ 2025-26ನೇ ಸಾಲಿನಲ್ಲಿ ಕರ್ನಾಟಕ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಯಡಿ ಸಾಲ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಜೂನ್ 30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಕರ್ನಾಟಕ ಅಲೆಮಾರಿ ಮತ್ತು ಅರೆಅಲೆಮಾರಿ ಅಭಿವೃದ್ಧಿ ನಿಗಮದಡಿಯಲ್ಲಿ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ) ಹಾಗೂ ಸ್ವಾತಂತ್ರ್ಯ ಅಮೃತ ಮಹೋತ್ಸವ ಮನ್ನಡೆ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು, ಇತರೆ ದಾಖಲೆಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಗಳಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023-24 ಹಾಗೂ 2024-25ನೇ ಸಾಲಿಗೆ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ಸೈಟ್ www.kaad.karnataka.gov.in ಅಥವಾ ಸಹಾಯವಾಣಿ ಸಂಖ್ಯೆ 080-22374832, ಮತ್ತು 8050770004, 8050770005 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ವ್ಯವಸ್ಥಾಪಕಿ ಹೆಚ್.ಶಿಲ್ಪಾ ತಿಳಿಸಿದ್ದಾರೆ.

### ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ: ಸಾಲ ಸೌಲಭ್ಯಕ್ಕೆ ಅರ್ಜಿ

» **ಚಿತ್ರದುರ್ಗ**

ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳ ಪ್ರವರ್ಗ-3ಬಿಗೆ ಸೇರಿದ ಮರಾಠ ಮತ್ತು ಮರಾಠ ಉಪಜಾತಿಗೆ ಸೇರಿದ ಜನಾಂಗದವರ ಆರ್ಥಿಕ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಡಿಯಲ್ಲಿ ಸಾಲ ಸೌಲಭ್ಯಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜುಲೈ 4 ಸಂಜೆ 5:30ರ ಒಳಗಾಗಿ ಅರ್ಜಿ ಸಲ್ಲಿಸಬೇಕು. ಈ ನಿಗಮದಡಿಯಲ್ಲಿ ಅನುಷ್ಟಾನಗೊಳಿಸುತ್ತಿರುವ ಶ್ರೀ ಶಹಜೀರಾಜೇ ಸಮೃದ್ಧಿ ಯೋಜನೆ (ಸ್ವಯಂ ಉದ್ಯೋಗ ನೇರ ಸಾಲ ಮತ್ತು ಸಹಾಯಧನ), ಜೀಜಾವು ಜಲಭಾಗ್ಯ ಯೋಜನೆ (ಗಂಗಾ ಕಲ್ಯಾಣ ನೀರಾವರಿ ಯೋಜನೆ), ಅರಿವು ಶೈಕ್ಷಣಿಕ ಸಾಲ ಯೋಜನೆ, ರಾಜಶ್ರೀ ಶಾಹುಮಹಾರಾಜ ವಿದೇಶಿ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ, ಮರಾಠ ಮಿಲ್ಟ್ರಿ ಹೋಟೆಲ್ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕ್‌ಗಳ ಸಹಯೋಗದೊಂದಿಗೆ) ಸ್ವಾವಲಂಬಿ ಸಾರಥಿ ಯೋಜನೆ ಹಾಗೂ ಸ್ವಾತಂತ್ರ್ಯ ಅಮೃತ್ ಮಹೋತ್ಸವ ಮುನ್ನಡೆ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹತೆಗಳು: ಈ ಯೋಜನೆಗಳಡಿಯಲ್ಲಿ ಅರ್ಜಿ ಸಲ್ಲಿಸಬಯಸುವವರು ಪ್ರವರ್ಗ-3-ಬಿ ಅಡಿಯಲ್ಲಿ 2(ಎ)ಇಂದ 2(ಎಫ್)ವರೆಗೆ ಬರುವ ಸಮುದಾಯಕ್ಕೆ ಸೇರಿರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನಮೂನೆ-3(ಬಿ)ಯಲ್ಲಿ ಪಡೆದಿರಬೇಕು (ಪ್ರಮಾಣ ಪತ್ರ ಚಾಲ್ತಿಯಲ್ಲಿರಬೇಕು). ಅರ್ಜಿದಾರನು ಕರ್ನಾಟಕದ ರಾಜ್ಯದವರಾಗಿರಬೇಕು ಹಾಗೂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು. ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು. ಸರ್ಕಾರಿ ಸೌಲಭ್ಯವನ್ನು (ಸಾಲ ಸಹಾಯಧನ) ಪಡೆಯುವ ಸಂಬಂಧ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿಸಿರಬೇಕು. ಒಂದು ಕುಟುಂಬದಲ್ಲಿ ಒಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. ಆದರೆ ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಇಬ್ಬರಿಗೆ ಅವಕಾಶವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ಸಹಾಯವಾಣಿ ಸಂಖ್ಯೆ 8867537799, ದೂರವಾಣಿ ಸಂಖ್ಯೆ 080-29903994 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು. ಯೋಜನೆಗಳ ಮಾರ್ಗಸೂಚಿಗಳು, ಸಲ್ಲಿಸಬೇಕಾದ ದಾಖಲೆಗಳು, ಜಿಲ್ಲಾ ವ್ಯವಸ್ಥಾಪಕರ ಕಚೇರಿ ವಿಳಾಸವನ್ನು ಹಾಗೂ ಹೆಚ್ಚಿನ ವಿವರಗಳನ್ನು https://kmcdc.karnataka.gov.in ನಲ್ಲಿ ತಿಳಿಯಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕಿ ಹೆಚ್.ಶಿಲ್ಪಾ ತಿಳಿಸಿದ್ದಾರೆ.

### ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಮುಖ್ಯಸ್ಥ ಆರ್.ರಜನೀಕಾಂತ ಹೇಳಿಕೆ

# ಮರ ಆಧಾರಿತ ನೈಸರ್ಗಿಕ ಕೃಷಿ: ಆದಾಯಕ್ಕೆ ದಾರಿ

» **ಚಿತ್ರದುರ್ಗ**

ಜೇನು ಕೃಷಿ, ಗೋವು ಆಧಾರಿತ ಮತ್ತು ಮರ ಆಧಾರಿತ ನೈಸರ್ಗಿಕ ಕೃಷಿಯ ಅಳವಡಿಕೆಯಿಂದ ಉತ್ತಮ ಆರೋಗ್ಯ, ಪರಿಸರ ಮತ್ತು ಸುಸ್ಥಿರ ಆದಾಯ ಪಡೆಯಲು ದಾರಿ ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಮುಖ್ಯಸ್ಥ ಆರ್. ರಜನೀಕಾಂತ ಹೇಳಿದರು.



ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಈಚೆಗೆ ಜಿಲ್ಲೆಯ ಆಸಕ್ತ ಕೃಷಿಕರಿಗೆ ಮರ ಆಧಾರಿತ ನೈಸರ್ಗಿಕ ಕೃಷಿ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹೆಚ್ಚಿನ ಬೆಳೆ ಇಳುವರಿ ಪಡೆಯುವ ಉದ್ದೇಶದಿಂದ ಅಸಮರ್ಪಕ ಹಾಗೂ ಅವೈಜ್ಞಾನಿಕವಾಗಿ ರಸಗೊಬ್ಬರ ಮತ್ತು ಕೀಟನಾಶಕಗಳ ಬಳಕೆಯಿಂದ ರೈತರ ಬೆಳೆ ಉತ್ಪಾದಾನೆ ವೆಚ್ಚ ಹೆಚ್ಚಾಗುತ್ತಿದ್ದು ಪರಿಸರದ ಮಾಲಿನ್ಯ ಮತ್ತು ಜೀವವೈವಿದ್ಯತೆಯನ್ನು ಕಾಪಾಡುವಲ್ಲಿ ವಿಫಲರಾಗಿದ್ದೇವೆ ಎಂದು ತಿಳಿಸಿದ ಅವರು, ರೈತಬಾಂಧವರು ತರಬೇತಿಯ ಸದುಪಯೋಗ ಪಡೆದು ಕೊಳ್ಳುವಂತೆ ಮನವಿ ಮಾಡಿದರು.

. ಪ್ರಗತಿ ಪರ ಕೃಷಿಕ ಸಿದ್ದವೀರಪ್ಪ ಮಾತನಾಡಿ, ಪ್ರಕೃತಿಯನ್ನು ಸಂರಕ್ಷಣೆ ಮಾಡುವುದು ಪ್ರತಿಯೊಬ್ಬರ ಹೊಣೆಗಾರಿಕೆಯಾಗಿದ್ದು, ಪರಿಸರ ಸ್ನೇಹಿ ಕೃಷಿ ಮಾಡಬೇಕೆಂದರು.

ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಮಾಲತೇಶ್ ಅರಸ್ ಮಾತನಾಡಿ, ಪರಿಸರ ಸಂರಕ್ಷಣೆಗೆ ಜೀವವೈವಿದ್ಯತೆ ಕಾಪಾಡುವುದು ಮತ್ತು ಜಲಜಾಗೃತಿ ಮೂಡಿಸುವುದು ಅನಿವಾರ್ಯವಾಗಿದ್ದು, ಇಂಥಹ ತರಬೇತಿಗಳು ಇಂದಿನ ಅವಶ್ಯಕತೆಯಾಗಿದೆಂದರು.

ತಾಂತ್ರಿಕ ಅಧಿವೇಶನದಲ್ಲಿ ಬೆಂಗಳೂರು ಗ್ಲೋಬಲ್‌ಗ್ರೀನ್‌ಗ್ರೋಥ್‌ಸಂಸ್ಥೆ,ಕರ್ನಾಟಕ ವೈಜ್ಞಾನಿಕ ಸಲಹಾ ಸಮಿತಿಯ ಮಂಡಳಿ ಸದಸ್ಯರು ಹಾಗೂ ಹಲವು ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಸಂಸ್ತೆಗಳಿಗೆ ವೈಜ್ಞಾನಿಕ ಸಲಹೆಗಾರರು ಮತ್ತು ಮಂಡಳಿ ಸಮಿತಿ ಸದಸ್ಯ ಡಾ. ಚಂದ್ರಶೇಖರ್ ಎಂ ಬಿರಾದಾರ್ ಮಾತನಾಡಿ, ನಾವು ಮಾಡುವ ಕೃಷಿ ಭೂಮಿಯಲ್ಲಿ ಶೇ 33 ರಷ್ಟು ಮರಗಳಿರಬೇಕು ಆದರೆ ಶೇ 3ಕ್ಕಿಂತ ಕಡಿಮೆ ಇದ್ದು ವಾತವರಣದಲ್ಲಿ ಏರುಪೇರಾಗಿದ್ದು ಸರಿಯಾದ ಪ್ರಮಾಣ ಮತ್ತು ಸಮಯದಲ್ಲಿ ಮಳೆ ಬರುತ್ತಿಲ್ಲವೆಂದರು. ಮರ ಆಧಾರಿತ ನೈಸರ್ಗಿಕ ಕೃಷಿಯಿಂದ ಉತ್ತಮ ಮಳೆ, ಮಣ್ಣಿನ ಆರೋಗ್ಯದಲ್ಲಿ ಸುಧಾರಣೆ, ಕಡಿಮೆ ಮಣ್ಣಿನ ಸವಕಳಿ, ಮಿತ್ರ ಹಾಗೂ ಶತ್ರು ಕೀಟಗಳ ಸಮತೋಲನೆ, ತಂಪಾದ ವಾತವರಣ, ಕಡಿಮೆ ನೀರಿನ ಆವಿಯಾಗುವಿಕೆ, ಹೆಚ್ಚಿನ ನೀರಿನ ಇಂಗುವಿಕೆ, ವಾತವರಣದ ಇಂಗಾಲದ ಪ್ರಮಾಣದಲ್ಲಿ ಗಣನೀಯ ಇಳುಮುಖವಾಗುವುದಲ್ಲದೆ ಉತ್ತಮ ಪರಿಸರ ಮತ್ತು ಆರೋಗ್ಯ ಪಡೆಯಲು ಸಹಕಾರಿಯಾಗಿದೆಂದರು. ಇದಲ್ಲದೆ, ನೈಸರ್ಗಿಕ ಕೃಷಿಯಲ್ಲಿ ಮುಖ್ಯವಾಗಿ ಕಡಿಮೆ ಉಳಿಮೆ, ಭೂಮಿಯ ಮುಚ್ಚಿಗೆ, ಬಹು ಮಹಡಿ ಬೆಳೆ ಪದ್ಧತಿ ಅಳವಡಿಕೆ, ಜೀವಾಮೃತ ಮತ್ತು ಬೀಜಾಮೃತ ಬಳಕೆಯಿಂದ ಸುಸ್ಥಿರ ಇಳುವರಿ ಪಡೆಯಲು ಅನುಕೂಲಕರವಾಗಿದೆಂದರು. ರೈತರು ಹೊಲದಲ್ಲೇ ಮನೆಮಾಡಿಕೊಂಡು ಕೃಷಿಯಲ್ಲಿ ತೊಡಗುವುದರಿಂದ ಕೃಷಿಯ ಮೇಲ್ವಾಚರಣೆ ಮಾಡುವುದು ಸುಲಭವಾಗುತ್ತದೆ ಎಂದರು.

ತಾಂತ್ರಿಕ ಅಧಿವೇಶನದ ನಂತರ ಅಪರಾಹ್ನ, ರೈತರೊಂದಿಗೆ ಮರ ಆಧಾರಿತ ನೈಸರ್ಗಿಕ ಕೃಷಿಯ ಕುರಿತು ಸಂವಾದ ಕರ್ಯಕ್ರಮದಲ್ಲಿ ಒಂದು ಎಕರೆಯಲ್ಲಿ ಕನಿಷ್ಟ 40 ರಿಂದ 100 ವರ್ಷವಿಡಿ ಹಣ್ಣು ನೀಡುವ ವಿವಿಧ ಜಾತಿಯ ಮರಗಳನ್ನು ಸಮಯೋಜನೆ ಮಾಡಬಹುದು. ಮುಂಗಾರು ಪೂರ್ವದಲ್ಲಿ 5 ಕೆಜಿ ವಿವಿಧ ಏಕದಳ ಧಾನ್ಯ, 5 ಕೆಜಿ ವಿವಿಧ ದ್ವಿದಳ ಧಾನ್ಯ ಮತ್ತು 5 ಕೆಜಿ ವಿವಿಧ ಎಣ್ಣೇಕಾಳು ಧಾನ್ಯಗಳ ಬೀಜಗಳನ್ನು ಬಿತ್ತನೆ ಮಾಡಿ ನಂತರ ಬೀಳುವ ಮಳೆಯಿಂದ ಮೊಳಕೆಯೊಡೆದು 40-45 ದಿನದ ಬೆಳೆಯನ್ನು ನಂತರ ಭೂಮಿಗೆ ಸೇರಿಸುವುದರಿಂದ 70-80 ಮೆಟ್ರಿಕ್ ಟನ್ ಹಸಿರೆಲೆ ಗೊಬ್ಬರ ಸೇರಿಸಿದಂತಾಗುತ್ತದೆ ಮತ್ತು ಜೀವವೈವಿದ್ಯತೆ ಹೆಚ್ಚಿಸಲು ಸಹಕಾರಿಯಗಿದೆ. ರೈತರು ನೈಸರ್ಗಿಕ ಕೃಷಿಯಲ್ಲಿ ವಿವಿಧ ಜಾತಿಯ ಮರ ಅಥವಾ ಹಣ್ಣಿನ ಗಿಡಗಳನ್ನು ಸಂಯೋಜನೆ ಮಾಡುವಾಗ ತಮ್ಮ ಸುತ್ತಮುತ್ತಿಲಿನ 50 ಕಿಮೀ ವ್ಯಾಸದಲ್ಲಿ ಬೆಳೆಯುವ ಸ್ಥಳೀಯ ತಳಿಗಳನ್ನು ಉಪಯೋಗಿಸಬಹುದಾಗಿದೆ. ಏಕ ಬೆಳೆ ಪದ್ಧತಿಯಿಂದ ಬಹುಬೆಳೆಪದ್ಧತಿಯನ್ನು ಅಳವಡಿಸುವುದರಿಂದ ಸುಸ್ಥಿರ ಆದಾಯ ಮತ್ತು ಮಣ್ಣಿನ ಆರೋಗ್ಯ ಸುಧಾರಿಸಲು ಅನುಕೂಲಕರವಾಗುತ್ತದೆ. ರೈತರು ತಮಗೆ ಬೇಕಾದ ಹಣ್ಣು, ಆಹಾರ, ಮೇವು, ಗೊಬ್ಬರ, ಉರುವಲು ಮತ್ತು ಜೈವಿಕ ಇದ್ದಿಲು ಪೂರೈಸುವ ಮರಗಿಡಗಳನ್ನು ತಮ್ಮ ಕೃಷಿಯಲ್ಲಿ ಸಂಯೋಜನೆ ಮಾಡಬೇಕೆಂದರು. ಜಾಜಿಯಿಲ್ಲದ ಕಾಯಕವೆಂದರೆ ಕೃಷಿಯಾಗಿದ್ದು, ಒಗ್ಗಟ್ಟಾಗಿ ನೈಸರ್ಗಿಕ ಕೃಷಿ ಅಳವಡಿಕೆಯಿಂದ ರೈತರು ಸ್ವಾವಲಂಬನೆಯ ಜೀವನ ಸಾಗಿಸಬಹುದೆಂದರು.

ತರಬೇತಿ ಕಾರ್ಯಕ್ರಮದಲ್ಲಿ ಜಿಲ್ಲಾ ಜಾಗೃತಿ ಮತ್ತು ಪರಿಸರ ಸಂರಕ್ಷಣಾ ಉಪಾಧ್ಯಕ್ಷ ಓಂಕಾರಪ್ಪ ಸೇರಿದಂತೆ ರೈತರು ಇದ್ದರು.

# ಹೊರ ಗುತ್ತಿಗೆ ರದ್ದುಪಡಿಸಿ ಪೌರ ಕಾರ್ಮಿಕರನ್ನು ನೇರ ನೇಮಕಾತಿ ಮಾಡಿಕೊಳ್ಳುವಂತೆ ಒತ್ತಾಯ

» **ಚಿತ್ರದುರ್ಗ**



ಹೊರ ಗುತ್ತಿಗೆ ರದ್ದುಪಡಿಸಿ ಪೌರ ಕಾರ್ಮಿಕರನ್ನು ನೇರ ನೇಮಕಾತಿ ಮಾಡಿಕೊಂಡು ಸರ್ಕಾರ ಸಂಬಳ ನೀಡಬೇಕೆಂದು ಪೌರ ಕಾರ್ಮಿಕರ ಸಂಘದ ರಾಜ್ಯಾಧ್ಯಕ್ಷ ನಾರಾಯಣ್ ಒತ್ತಾಯಿಸಿದರು.

ಪತ್ರಕರ್ತರ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಹೊರ ಗುತ್ತಿಗೆರದ್ದುಪಡಿಸುವಂತೆ 2017 ರಿಂದ ಹೋರಾಟ ನಡೆಸುತ್ತಿದ್ದೇವೆ. ಪೌರ ಕಾರ್ಮಿಕರು, ವಾಹನ ಚಾಲಕರು, ಗಟಾರದಲ್ಲಿ ಕೆಲಸ ಮಾಡುವವರು, ಕಸ ವಿಂಗಡಿಸುವವರು ಹೀಗೆ ಹಲವು ಬಗೆಯ ಪೌರ ಕಾರ್ಮಿಕರು ಆರೋಗ್ಯ ಹಾಗೂ ಜೀವನ ಭದ್ರತೆಯಿಲ್ಲದೆ ಕೆಲಸ ಮಾಡುತ್ತಿದ್ದಾರೆ. ರಾಜ್ಯದಲ್ಲಿ 39 ಸಾವಿರ ಪೌರ ಕಾರ್ಮಿಕರಿದ್ದು, 29300 ಪೌರ ಕಾರ್ಮಿಕರನ್ನು ಖಾಯಂಗೊಳಿಸಲಾಗಿದೆ. ಉಳಿದ ಪೌರ ಕಾರ್ಮಿಕರನ್ನು ಯಾವಾಗ ನೇಮಕ ಮಾಡುತ್ತೀರೆಂಬುದು ಸರ್ಕಾರಕ್ಕೆ ನಮ್ಮ ಪ್ರಶ್ನೆ? ಬೇರೆ ಜಿಲ್ಲೆಗಳಲ್ಲಿ ಪೌರ ಕಾರ್ಮಿಕರಿಗೆ ಸರ್ಕಾರದಿಂದ ನಿವೇಶನ ವಿತರಿಸಲಾಗಿದೆ. ಅದೇ ರೀತಿ ಚಿತ್ರದುರ್ಗ ಜಿಲ್ಲೆಯಲ್ಲಿಯೂ ಪೌರ ಕಾರ್ಮಿಕರಿಗೆ ನಿವೇಶನಗಳು ಸಿಗಬೇಕು. ಕಸ ಗುಡಿಸುವವರು ಹಾಗೂ ಘಟಾರದಲ್ಲಿ ಕೆಲಸ ಮಾಡುವವರನ್ನು ಸರ್ಕಾರ ತುಚ್ಚವಾಗಿ ಕಾಣುತ್ತಿರುವುದು ಸರಿಯಲ್ಲ. ಒಳ ಮೀಸಲಾತಿ ಜಾರಿಯಾಗುವತನಕ ನೇಮಕಾತಿಯನ್ನು ತಡೆಹಿಡಿದಿದ್ದೇವೆಂಬ ನೆಪ ಹೇಳುವುದು ಬೇಡ. ತುರ್ತಾಗಿ ಪೌರ ಕಾರ್ಮಿಕರನ್ನು ಖಾಯಂಗೊಳಿಸಬೇಕೆಂಬುದು ನಮ್ಮ ಬೇಡಿಕೆ ಎಂದರು.

ಕೆ.ಬಿ.ಓಬಳೇಶ್ ಮಾತನಾಡಿ ಹಿಂದಿನ ಬಿಜೆಪಿ. ಈಗಿನ ಕಾಂಗ್ರೆಸ್ ಸರ್ಕಾರಗಳು ನಮ್ಮ ಹೋರಾಟಕ್ಕೆ ಮಣಿದು ಎಲ್ಲಾ ಪೌರ ಕಾರ್ಮಿಕರನ್ನು ಖಾಯಂಗೊಳಿಸುವುದಾಗಿ ಭರವಸೆ ಕೊಟ್ಟಿದ್ದವು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೇಳಿದಂತೆ ನಡೆದುಕೊಳ್ಳಲಿ. ಎರಡು ವರ್ಷಗಳಾದರೂ ನಮ್ಮ ಬೇಡಿಕೆ ಈಡೇರಿಲ್ಲ. ಕಸ ವಿಂಗಡಣೆ ಮಾಡುವವರು ಹಾಗೂ ಚರಂಡಿ ಕೆಲಸ ಮಾಡುವವರ ಸ್ಥಿತಿ ನೋಡುವಂತಿಲ್ಲ. ಜಿಲ್ಲೆಯಲ್ಲಿ ಪೌರ ಕಾರ್ಮಿಕರನ್ನು ಕಸಕ್ಕಿಂತ ಕಡೆಯಾಗಿ ಕಾಣಲಾಗುತ್ತಿದೆ. ರಾಜ್ಯ ಸರ್ಕಾರ ತುರ್ತಾಗಿ ಕ್ರಮ ಕೈಗೊಳ್ಳಬೇಕು. 2018 ರಿಂದ ಇಲ್ಲಿಯವರೆಗೂ ರಾಜ್ಯದಲ್ಲಿ 148 ಪೌರ ಕಾರ್ಮಿಕರು ನಿಧನರಾಗಿದ್ದಾರೆ. ಮಾನವ ಹಕ್ಕುಗಳ ಉಲ್ಲಂಘನೆಯಾಗುತ್ತಿದೆ. 1010 ಪೌರ ಕಾರ್ಮಿಕರು ಚಿತ್ರದುರ್ಗ ಜಿಲ್ಲೆಯಲ್ಲಿದ್ದಾರೆ. ನಮ್ಮ ನ್ಯಾಯಯುತವಾದ ಬೇಡಿಕೆಗಳು ಶೀಘ್ರವೇ ಈಡೇರಬೇಕು ಎಂದು ಮನವಿ ಮಾಡಿದರು.

ಡಿ.ದುರುಗೇಶ್, ಜಗದೀಶ್, ರಾಜಣ್ಣ ಇನ್ನು ಅನೇಕರು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.





**ಟ್ರಾಕ್ಟರ್ ಪಲ್ಟಿಯಾಗಿ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರನ್ನು ಭೇಟಿಯಾಗಿ ಧೈರ್ಯ ತುಂಬಿದ ಬಿ.ಯೋಗೇಶ್‌ಬಾಬು.**

# ಒಳ ಮೀಸಲಾತಿ: ಸಮೀಕ್ಷಾ ಕಾರ್ಯ ಅವಧಿ ಮರು ವಿಸ್ತರಣೆ



**ಚಿತ್ರದುರ್ಗ:** ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಕುರಿತು ನಿವೃತ್ತ ನ್ಯಾಯಮೂರ್ತಿ ಡಾ.ಹೆಚ್.ಎನ್.ನಾಗಮೋಹನದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗವನ್ನು ಸರ್ಕಾರ ರಚಿಸಿದ್ದು, ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಂಬಂಧದ ವಿವಿಧ ಅಂಶಗಳ ಬಗ್ಗೆ ದತ್ತಾಂಶ ಸಂಗ್ರಹಣೆಗಾಗಿ ಜಿಲ್ಲೆಯಲ್ಲಿ ನಡೆದಿರುವ ಸಮೀಕ್ಷೆ ಕಾರ್ಯದ ಅವಧಿಯನ್ನು ಜೂನ್ 22 ರವರೆಗೆ ಮರು ವಿಸ್ತರಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.ಪರಿಶಿಷ್ಟ ಜಾತಿ ಒಳಮೀಸಲಾತಿ ಸಂಬಂಧ ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆ ಕಾರ್ಯ ಕಳೆದ ಮೇ 05 ರಿಂದ ಆರಂಭಗೊಂಡಿದ್ದು, ಕಾರ್ಯದರ್ಶಿಗಳು, ಏಕ ಸದಸ್ಯ ಆಯೋಗ, ಬೆಂಗಳೂರು ಅವರ ಆದೇಶದಂತೆ ಸಮೀಕ್ಷಾ ಕಾರ್ಯವನ್ನು ಜೂನ್ 22 ರವರೆಗೆ ಕೈಗೊಳ್ಳಲು ಮರು ವಿಸ್ತರಿಸಲಾಗಿದೆ.ಪರಿಷ್ಕೃತ ವೇಳಾಪಟ್ಟಿಯಂತೆ ಎರಡನೆ ಹಂತದಲ್ಲಿ, ನಾಗರೀಕ ಸೇವಾ ಕೇಂದ್ರಗಳಾದ “ಕರ್ನಾಟಕ ಒನ್, ಬೆಂಗಳೂರು ಒನ್ ಮತ್ತು ಗ್ರಾಮ ಒನ್ ಕೇಂದ್ರಗಳಲ್ಲಿ, ಮನೆ-ಮನೆ ಭೇಟಿಯ ಅವಧಿಯಲ್ಲಿ ಬಿಟ್ಟುಹೋದ ಪರಿಶಿಷ್ಟ ಜಾತಿ ಕುಟುಂಬಗಳ ಮಾಹಿತಿಯನ್ನು ನಮೂದಿಸುವ ಕಾರ್ಯ ಜೂನ್ 22 ರವರೆಗೆ ಜರುಗಲಿದೆ. ಮೂರನೆ ಹಂತದಲ್ಲಿ ಸ್ವಯಂ ಘೋಷಣೆ- ಆನ್‌ಲೈನ್ ಲಿಂಕ್ https://schedulecaste survykarnataka.gov.i/selfdeclartion ಬಳಸಿ ಸಮೀಕ್ಷೆ ಕಾರ್ಯವೂ ಕೂಡ ಜೂನ್ 22 ರವರೆಗೆ ಜರುಗಲಿದೆ. ಪರಿಷ್ಕೃತ ವೇಳಾಪಟ್ಟಿಯನ್ವಯ ಸಮೀಕ್ಷೆ ಸಂದರ್ಭದಲ್ಲಿ ಗಣತಿದಾರರಿಗೆ ಮತ್ತು ಮೇಲ್ವಿಚಾರಕರಿಗೆ ಕುಟುಂಬದ ಸಂಪೂರ್ಣ ಮಾಹಿತಿ ನೀಡಿ ಸಮೀಕ್ಷಾ ಕಾರ್ಯವನ್ನು ಯಶಸ್ವಿಗೊಳಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿಗಳು ಕೋರಿದ್ದಾರೆ.


## ಪ್ರಮುಖ ಸುದ್ದಿ

### ಹೊಸದುರ್ಗ ತಾಲೂಕು ವಾಲ್ಮೀಕಿ ನಾಯಕ ಸಮಾಜದ ಮುಖಂಡರಿಂದ ಆಗ್ರಹ

# ದಕ್ಷ ಅಧಿಕಾರಿ ದಯಾನಂದ್ ಅಮಾನತು ಹಿಂಪಡೆಯಿರಿ

» **ಹೊಸದುರ್ಗ**

ಆರ್‌ಸಿಬಿ ವಿಜಯೋತ್ಸವದ ಸಂದರ್ಭದಲ್ಲಿ ನಡೆದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರು ಪೊಲೀಸ್ ಕಮಿಷನರ್ ಬಿ.ದಯಾನಂದ ಅವರನ್ನು ಅಮಾನತು ಮಾಡಿರುವ ಸರ್ಕಾರದ ಕ್ರಮ ಸರಿಯಲ್ಲ, ಕೂಡಲೇ ಅಮಾನತು ಹಿಂಪಡೆಯಿರಿ ಎಂದು ಹೊಸದುರ್ಗ ತಾಲೂಕು ವಾಲ್ಮೀಕಿ ನಾಯಕ ಸಮಾಜದ ಮುಖಂಡರು, ಪಟ್ಟಣದ ತಾಲೂಕು ಕಚೇರಿಯಲ್ಲಿ ತಹಶೀಲ್ದಾರ್ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿದರು.



ಇದೇ ಸಂದರ್ಭದಲ್ಲಿ ಮುಖಂಡ ಮಳಲಿ ವಿಜಯಕುಮಾರ್ ಮಾತನಾಡಿ, ವ್ಯತಿರಿಕ್ತ ಸನ್ನಿವೇಶದಲ್ಲಿಯೂ ಬೆಂಗಳೂರು ಪೊಲೀಸರು ಸಮರ್ಥವಾಗಿ ಕರ್ತವ್ಯ ನಿರ್ವಹಿಸಿದ್ದಾರೆ. ಕಾರಣ ದೊಡ್ಡ ಪ್ರಮಾಣದ ಅನಾಹುತ ತಪ್ಪಿದೆ. ಪ್ರಜ್ಞಾಹೀನ ಸ್ಥಿತಿಯಲ್ಲಿದ್ದವರು ಹಾಗೂ ಗಾಯಾಳುಗಳನ್ನು ಆಸ್ಪತ್ರೆಗೆ ಸೇರಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಅವರ ಸಂಬಂಧಿಕರನ್ನು ಕರೆಸಿದ್ದಾರೆ. ಆದರೆ, ಪೊಲೀಸರನ್ನೇ ಹೊಣೆಗಾರರನ್ನಾಗಿ ಮಾಡಿ ಅಮಾನತು ಮಾಡಿದ್ದು ಸರಿಯಲ್ಲವೆಂದು ಎಚ್ಚರಿಸಿದ್ದರು.

‘ಬಿ.ದಯಾನಂದ ಅವರು ದಕ್ಷ ಪೊಲೀಸ್ ಅಧಿಕಾರಿಯಾಗಿದ್ದಾರೆ. ಸಂಭ್ರಮಾಚರಣೆ ವೇಳೆ ಉಂಟಾದ ನೂಕು ನುಗ್ಗಲಿನಲ್ಲಿ 11 ಮಂದಿ ಬಲಿಯಾಗಿದ್ದಾರೆ. ಯಾವುದೇ ಪೂರ್ವ ಸಿದ್ಧತೆ ಇಲ್ಲದೆ, ಏಕಾಏಕಿ ರಾಜ್ಯ ಸರ್ಕಾರ ಸಂಭ್ರಮಾಚರಣೆಯ ತೀರ್ಮಾನ ತೆಗೆದುಕೊಂಡು ಎಸಗಿದ ಎಡವಟ್ಟಿನಿಂದ ಅವಗಡ ನಡೆದಿದೆಯೇ ವಿನಃ ಈ ಪ್ರಕರಣದಲ್ಲಿ ಪೊಲೀಸರ ತಪ್ಪಿಲ್ಲ. ಕೂಡಲೇ ಅಮಾನತು ಆದೇಶ ವಾಪಸ್ ಪಡೆಯಬೇಕು. ಮತ್ತೆ ಅವರನ್ನು ಬೆಂಗಳೂರು ನಗರ ಪೊಲೀಸ್ ಆಯುಕ್ತರನ್ನಾಗಿ ನೇಮಿಸಬೇಕು’ಎಂದು ಆಗ್ರಹಿಸಿದರು.

ಈ ವೇಳೆ ತಾಲೂಕು ವಾಲ್ಮೀಕಿ ನಾಯಕ ಸಮಾಜದ ಉಪಾಧ್ಯಕ್ಷ ಗೌಡ್ರು ತಿಪ್ಪೇಸ್ವಾಮಿ, ಮಾಜಿ ಅಧ್ಯಕ್ಷ ಹುಣವಿನಾಡು ತಿಪ್ಪೇಸ್ವಾಮಿ, ಲಕ್ಕಿಹಳ್ಳಿ ಶಿವಣ್ಣ, ಮುಖಂಡರಾದ ಕೊಂಡಜ್ಜಿ ನಾಗರಾಜ್, ಹೊನ್ನೇನಹಳ್ಳಿ ರಂಗಪ್ಪ, ಐಯ್ಯನಹಳ್ಳಿ ಹರೀಶ್, ವಾಲ್ಮೀಕಿ ರವಿತೇಜ, ಬೋಕಿಕೆರೆ ನಾಗರಾಜ್, ವಕೀಲ ನರೇಂದ್ರಬಾಬು, ವೀರವ್ವ ನಾಗತಿಹಳ್ಳಿ ಗಾದ್ರಪ್ಪ, ಸುನಂದಮ್ಮ, ಅರುಣ್ ಗಂಗಾಧರಪ್ಪ, ಕಪ್ಪಗೆರೆ ವಸಂತ್ ಕುಮಾರ್, ಕುರುಬರಹಳ್ಳಿ ಮಂಜುನಾಥ್, ಬೋಕಿಕೆರೆ ಕರಿಯಪ್ಪ, ತಣಿಗೆಕಲ್ಲು ಪ್ರಸನ್ನ, ಹೇರೂರು ಮಂಜುನಾಥ್, ಗ್ರಾ.ಪಂ.ಸದಸ್ಯರಾದ ಹುಣವಿನಡು ಶಿವರಾಜ್ ಮತ್ತು ಚನ್ನಸಮುದ್ರ ತಿಪ್ಪೇಸ್ವಾಮಿ ಸೇರಿದಂತೆ ಇತರರಿದ್ದರು.

## ಫಾಸ್ಟ್ ನ್ಯೂಸ್

### ತಾಯಿ ಮಗ ಕಾಣೆ: ಪತ್ತೆ ನೆರವಿಗೆ ಮನವಿ

» ಚಿತ್ರದುರ್ಗ

ಹೊಳಲ್ಕೆರೆ ತಾಲ್ಲೂಕಿನ ನಗರಘಟ್ಟ ಗ್ರಾಮದ ರೋಜ (28) ಹಾಗೂ ಮಗ ಪವನ್ (11) ಕಾಣೆಯಾದ ಕುರಿತು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುತ್ತದೆ.ಮೇ 26 ರಂದು ರೋಜ ಮತ್ತು ಮಗ ಪವನ್ ಅಜ್ಜಿ ಮನೆಗೆ ಹೋಗಿ ಬರುವುದಾಗಿ ಹೇಳಿ ಹೋದವರು ವಾಪಸ್ಸು ಮನೆಗೆ ಬಂದಿರುವುದಿಲ್ಲ. ಈ ಕುರಿತು ಪತಿ ಕಾಂತರಾಜ ಮೇ 28 ರಂದು ದೂರನ್ನು ನೀಡಿರುತ್ತಾರೆ. ಕಾಣೆಯಾದ ರೋಜ 05 ಅಡಿ ಎತ್ತರವಿದ್ದು, ದುಂಡು ಮುಖ, ಎಣ್ಣೆಗೆಂಪು ಬಣ್ಣ, ಸಾಧಾರಣ ಮೈಕಟ್ಟು ಹೊಂದಿರುತ್ತಾಳೆ. ಎಡಗೈ ಮೇಲೆ ಕಾಂತರಾಜ ಎಂದು ಅಚ್ಚೆ ಹಾಕಿದ ಗುರುತು ಇರುತ್ತದೆ. ಮನೆಯಿಂದ ಹೋಗುವಾಗ ನೀಲಿ ಬಣ್ಣದ ಚೂಡಿದಾರ ಧರಿಸಿರುತ್ತಾರೆ. ಪವನ್ 3.5 ಅಡಿ ಎತ್ತರವಿದ್ದು, ದುಂಡುಮುಖ, ಕಪ್ಪುಬಣ್ಣ, ಸಾಧಾರಣ ಮೈಕಟ್ಟು ಹೊಂದಿರುತ್ತಾನೆ. ಕಾಣೆಯಾದವರ ಗುರುತು ಪತ್ತೆಯಾದಲ್ಲಿ ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08191-277277, 9480803165, ಹೊಳಲ್ಕೆರೆ ವೃತ್ತ ನಿರೀಕ್ಷಕರ ಕಛೇರಿ ದೂರವಾಣಿ ಸಂಖ್ಯೆ 08191-275376, 9480803135, ಪೊಲೀಸ್ ಉಪಾಧೀಕ್ಷಕರ ಕಚೇರಿ ದೂರವಾಣಿ ಸಂಖ್ಯೆ 08194-222430, ಜಿಲ್ಲಾ ಕಂಟ್ರೋಲ್ ರೂಂ ಸಂಖ್ಯೆ 08194-222782, 9480803100 ಗೆ ಕರೆ ಮಾಡುವಂತೆ ಪೊಲೀಸ್ ಉಪನಿರೀಕ್ಷಕರು ತಿಳಿಸಿದ್ದಾರೆ.

### ಉಪ್ಪಾರ ನಿಗಮ: ವಿವಿಧ ಯೋಜನೆಗಳಿಗೆ ಅರ್ಜಿ

» ಚಿತ್ರದುರ್ಗ

ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತದಿಂದ 2025-26ನೇ ಸಾಲಿನ ಸಾಲ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ) ಹಾಗೂ ಸ್ವಾತಂತ್ರ್ಯ ಅಮೃತ ಮಹೋತ್ಸವ ಮನ್ನಡೆ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಗಳಾಗಿದ್ದು, ಉಪ್ಪಾರ ಸಮುದಾಯ ಹಾಗೂ ಅದರ ಉಪಜಾತಿಗಳಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ. ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು. ನಿಗಮದ ಅಥವಾ ಸರ್ಕಾರದ ಯಾವುದಾದರೂ ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು. ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು. ಅರಿವು ಯೋಜನೆಯಡಿ ಅಭ್ಯರ್ಥಿಯ ವಯೋಮಿತಿ 18 ವರ್ಷಗಳಿಂದ 30 ವರ್ಷಗಳ ಮಿತಿಯಲ್ಲಿರಬೇಕು ವಾರ್ಷಿಕ ವರಮಾನ ರೂ.3.50/- ಲಕ್ಷಗಳು. ಸ್ವಾವಲಂಬಿ ಸಾರಥಿ ಯೋಜನೆಯಡಿ ವಯೋಮಿತಿ21 ವರ್ಷಗಳಿಂದ 45 ವರ್ಷಗಳ ಮಿತಿಯಲ್ಲಿರಬೇಕು. ವಿದೇಶಿ ವ್ಯಾಸಂಗ ಸಾಲ ಯೋಜನೆಯಡಿ ಸಾಲ ಸೌಲಭ್ಯ ಪಡೆಯಲು ವಾರ್ಷಿಕ ವರಮಾನವು ರೂ:15.00 ಲಕ್ಷಗಳ ಮಿತಿಯಲ್ಲಿ ಇರಬೇಕು. ಸ್ನಾತಕೊತ್ತರ ಪದವೀಧರರಿಗೆ ವಿದ್ಯಾರ್ಥಿಯ ವಯಸ್ಸು 25 ಮತ್ತು ಪಿ.ಹೆಚ್.ಡಿ ಪಧವೀಧವಿದರರಿಗೆ 27 ವರ್ಷಗಳ ವಯೋಮಿತಿಯನ್ನು ನಿಗಧಿಪಡಿಸಲಾಗಿದೆ. ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆಯನ್ನು ಹಾಗೂ ಬ್ಯಾಂಕ್ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ.98,000/- ಮತ್ತು ನಗರ ಪ್ರದೇಶದವರಿಗೆ ರೂ.1,20,000/-ಗಳ ಮಿತಿಯೊಳಗಿರಬೇಕು. ಆಯ್ಕೆ ಮಾಡುವಾಗ ಮಹಿಳೆಯರಿಗೆ 33%, ವಿಕಲಚೇತನರಿಗೆ 5%,ತೃತೀಯ ಲಿಂಗಿಗಳಿಗೆ ಶೇ1% ಮೀಸಲಾತಿ ನಿಗದಿ ಮಾಡಲಾಗಿದೆ.

ಯೋಜನೆಗಳಡಿ ಸಹಾಯಧನ/ಸಾಲ-ಸೌಲಭ್ಯವನ್ನು ಪಡೆಯಲು ಇಚ್ಛಿಸುವವರ ಸೇವಾಸಿಂಧು ಪೋರ್ಟಲ್ https://www.kaushalkar.com ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಗಳಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023-24 ಹಾಗೂ 2024-25ನೇ ಸಾಲಿಗೆ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಜುಲೈ 7 ಅರ್ಜಿ ಸಲ್ಲಿಸಲು ಕಡೆಯ ದಿನವಾಗಿದೆ. ಅರಿವು ಶೈಕ್ಷಣಿಕ ಸಾಲ ಯೋಜನೆಗಳಿಗೆ ಯಾವುದೇ ಕೊನೆಯ ದಿನಾಂಕ ಇರುವುದಿಲ್ಲ. ನಿಗಮದ ವೆಬ್‌ಸೈಟ್ http://upparadevelopment.karnataka.gov.in ರಲ್ಲಿ ಅಥವಾ ನಿಗಮದ ಕೇಂದ್ರ ಕಛೇರಿ ದೂರವಾಣಿ ಸಂಖ್ಯೆ 080-22252555 ಕರೆ ಮಾಡಬಹುದು. ನಿಗಮದ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಮಗದ ಕಛೇರಿಗಳಲ್ಲಿ ಪೂರ್ವಾಹ್ನ10.00ರಿಂದ ಸಂಜೆ5.30ರವರೆಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವ್ಯವಸ್ಥಾಪಕಿ ಹೆಚ್.ಶಿಲ್ಪಾ ತಿಳಿಸಿದ್ದಾರೆ.

# ಜುಲೈ 12ರಂದು ರಾಷ್ಟ್ರೀಯ ಲೋಕ ಅದಾಲತ್

## ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ನ್ಯಾಯಾಧೀಶ ರೋಣ ವಾಸುದೇವ ಮಾಹಿತಿ- ವೈವಾಹಿಕ ಪ್ರಕರಣಗಳ ಸುಖಾಂತ್ಯಕ್ಕೆ ಪ್ರಯತ್ನ

» ಚಿತ್ರದುರ್ಗ



ಜಿಲ್ಲೆಯಲ್ಲಿ 838 ವಿಚ್ಛೇದನ ಪ್ರಕರಣ ಹಾಗೂ 668 ಜೀವನಾಂಶ ಕೋರಿಕೆ ಪ್ರಕರಣಗಳು ಬಾಕಿ ಇವೆ. ಲೋಕ ಅದಾಲತ್‌ನಲ್ಲಿ ವೈವಾಹಿಕ ಪ್ರಕರಣಗಳನ್ನು ಸುಖಾಂತ್ಯಗೊಳಿಸಲು ಪ್ರಯತ್ನಿಸಲಾಗುತ್ತಿದೆ. ಕಳೆದ ಬಾರಿ ಜರುಗಿದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ವಿಚ್ಛೇದನಕ್ಕಾಗಿ ಅರ್ಜಿ ಸಲ್ಲಿಸಿದ್ದ 14 ಜೋಡಿಗಳನ್ನು ಪುನಃ ಒಂದು ಮಾಡಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ರೋಣ ವಾಸುದೇವ ಹೇಳಿದರು.

ನಗರದ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಸೋಮವಾರ ಮುಂಬರುವ ಜುಲೈ 12 ರಂದು ಜರುಗಲಿರುವ ರಾಷ್ಟ್ರೀಯ ಲೋಕ ಅದಾಲತ್ ಆಯೋಜನೆ ಕುರಿತು ಪತ್ರಿಕಾಗೋಷ್ಠಿ ಯಲ್ಲಿ ಅವರು ಮಾತನಾಡಿದರು. ವಿಚ್ಛೇದನ ಪ್ರಕರಣಗಳ ಸಂಖ್ಯೆ ಏರಿಕೆಯಾಗುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ವಿಚ್ಛೇದನ ಪ್ರಕರಣಗಳೊಂದಿಗೆ ಜೀವನಾಂಶ ಕೋರಿಕೆ, ಕೌಟುಂಬಿಕ ದೌರ್ಜನ್ಯ, ವರದಕ್ಷಿಣಿ ಪ್ರಕರಣಗಳು ತಳುಕು ಹಾಕಿಕೊಂಡಿರುತ್ತವೆ. ವಿಚ್ಛೇದನ ಪ್ರಕರಣದಲ್ಲಿ ಸತಿ ಪತಿಯನ್ನು ಒಂದು ಮಾಡುವುದರಿಂದ ಈ ಪ್ರಕರಣಗಳು ಸಹ ವಿಲೇವಾರಿಯಾಗುತ್ತವೆ. ಕಳೆದ ಲೋಕ ಅದಾಲತ್‌ನಲ್ಲಿ ಚಾಲ್ತಿಯಲ್ಲಿ ಇದ್ದ 4575 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ. ಈ ಮೂಲಕ ನ್ಯಾಯಾಲಯಗಳಲ್ಲಿ ಬಾಕಿ ಇದ್ದ ಪ್ರಕರಣಗಳ ಪೈಕಿ ಶೇ.10 ರಷ್ಟು ಹೊರೆ ಕಡಿಮೆಯಾಗಿದೆ. ಇದರೊಂದಿಗೆ 1,06,249 ವ್ಯಾಜ್ಯಪೂರ್ವ ಪ್ರಕರಣಗಳು ಸಹ ವಿಲೇವಾರಿಯಾಗಿವೆ. 2025ರ ಜೂನ್ 01 ರಂತೆ ಜಿಲ್ಲೆಯಲ್ಲಿ ಸಿವಿಲ್ ಮತ್ತು ಕ್ರಿಮಿನಲ್ ವ್ಯಾಜ್ಯ ಪ್ರಕರಣಗಳು ಸೇರಿದಂತೆ ಒಟ್ಟು 46,515 ಪ್ರಕರಣಗಳು ವಿಚಾರಣೆಗೆ ಬಾಕಿ ಇವೆ. ಮುಂಬರುವ ಜುಲೈ 12 ರಂದು ನಡೆಯಲಿರುವ ಮೆಗಾ ಲೋಕ್ ಅದಾಲತ್‌ನಲ್ಲಿ 4 ರಿಂದ 5 ಸಾವಿರ ಪ್ರಕರಣಗಳನ್ನು ವಿಲೇ ಮಾಡಲು ಗುರಿ ಹೊಂದಲಾಗಿದೆ. ಈಗಾಗಲೇ 2588 ಪ್ರಕರಣಗಳನ್ನು ವಿಲೇವಾರಿಗೆ ಗುರುತಿಸಲಾಗಿದೆ ಎಂದು ನ್ಯಾಯಾಧೀಶ ರೋಣ ವಾಸುದೇವ ಮಾಹಿತಿ ನೀಡಿದರು.ಜನಸಂಖ್ಯೆಗೆ ಅನುಗುಣವಾಗಿ ನ್ಯಾಯಾಲಯಗಳ ಸಂಖ್ಯೆ ಇಲ್ಲದಿರುವುದರಿಂದ ನ್ಯಾಯಾಧೀಶರುಗಳು ಹೆಚ್ಚುವರಿ ಕಾರ್ಯಭಾರ ನಿರ್ವಹಿಸುತ್ತಿದ್ದಾರೆ. ಜಿಲ್ಲೆಯಲ್ಲಿ 293 ಕ್ರಿಮಿನಲ್ ಕಾಂಪೌಡಬಲ್, 4,848 ಚೆಕ್ ಅಮಾನ್ಯ, 838 ವಿವಾಹ ವಿಚ್ಛೇಧನ, 348 ವರದಕ್ಷಿಣೆ, 668 ಜೀವನಾಂಶ, 4046 ಆಸ್ತಿ ವಿಭಾಗ, 1596 ಬ್ಯಾಂಕ್, 758 ಹಣ ವಸೂಲಾತಿ, 2686 ವಾಹನ ಅಪಘಾತ, 118 ನೌಕರರ ಪರಿಹಾರ, 12 ಕಾರ್ಮಿಕ, 6 ವಿದ್ಯುತ್ ಕಾಯ್ದೆ, 138 ಗಣಿ ಮತ್ತು ಖನಿಜ, 1476 ಭೂಸ್ವಾಧೀನ, 822 ಪರಿಹಾರ, 835 ಅರಣ್ಯ, 96 ಭೂ ಅಧಿಗ್ರಹಣ, 415 ವಾಹನ ಅಧಿಗ್ರಹಣ 3496 ಇತರೆ ಅಧಿಗ್ರಹಣ 9087 ಇತರೆ ಸಿವಿಲ್ ಪ್ರಕರಣಗಳು, 1691 ಜನನ ಹಾಗೂ ಮರಣ, 1405 ಪಿಟಿ ಕೇಸ್, 6045 ಕ್ರಿಮಿನಲ್, 4792 ನಾನ್ ಕಾಂಪೌಡಬಲ್ ಪ್ರಕರಣ ಸೇರಿ ಒಟ್ಟು 46515 ಪ್ರಕರಣಗಳು ಬಾಕಿಯಿವೆ. ಕಕ್ಷಿಗಾರರು ಶೀಘ್ರವೇ ನ್ಯಾಯದಾನ ಸಿಗಬೇಕಾದರೆ ಲೋಕ್ ಅದಾಲತ್‌ನ ಸದುಪಯೋಗ ಪಡೆದುಕೊಳ್ಳಬೇಕು ಎಂದು ನ್ಯಾಯಾಧೀಶ ರೋಣ ವಾಸುದೇವ ಹೇಳಿದರು.

ಕಾನೂನು ಸೇವಾ ಪ್ರಾಧಿಕಾರದ ಪ್ರಯತ್ನದ ಫಲವಾಗಿ ಜಿಲ್ಲೆಯಲ್ಲಿ ಪೋಕ್ಸೋ ಕಾಯ್ದೆ ಕುರಿತು ಹೆಚ್ಚಿನ ಜಾಗೃತಿ ಮೂಡಿದೆ. ಪೋಕ್ಸೋ ಪ್ರಕರಣಗಳಲ್ಲಿ ಏರಿಕೆ ಕಂಡುಬಂದಿಲ್ಲ. ಆದರೆ ಪ್ರಕರಣಗಳನ್ನು ಇಳಿಮುಖ ಮಾಡುವುದು ಗುರಿಯಾಗಿದೆ. ನ್ಯಾಯಾಲಯದ ಆವರಣದಲ್ಲಿ ಹೊಸದಾಗಿ ಪಾರ್ಕಿಂಗ್ ವ್ಯವಸ್ಥೆ ನಿರ್ಮಿಸಲಾಗಿದೆ. ವಿವಿಧ ಪ್ರಕರಣಗಳಲ್ಲಿ ಜಪ್ತು ಮಾಡಿದ ವಾಹನಗಳ ವಿಲೇಗೂ ಕ್ರಮ ಕೈಗೊಳ್ಳುವುದಾಗಿ ನ್ಯಾಯಾಧೀಶ ರೋಣ ವಾಸುದೇವ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದರು.2025ರ ಜುಲೈ 12ರಂದು ನಡೆಯುವ ರಾಷ್ಟ್ರೀಯ ಲೋಕ ಅದಾಲತ್ ಸದುಪಯೋಗಪಡಿಸಿಕೊಂಡು ಪಕ್ಷಗಾರರು ರಾಜೀ ಸಂಧಾನದ ಮೂಲಕ ತಮ್ಮ ಪ್ರಕರಣಗಳನ್ನು ಸುಲಭ ಹಾಗೂ ಶೀಘ್ರವಾಗಿ ಯಾವುದೇ ಶುಲ್ಕ, ಖರ್ಚು ವೆಚ್ಚವಿಲ್ಲದೇ ತೀರ್ಮಾನ ಮಾಡಿಕೊಳ್ಳಬಹುದು. ಕಕ್ಷಿದಾರರು ನೇರವಾಗಿ ಅಥವಾ ವಕೀಲರ ಮೂಲಕ ಲೋಕ ಅದಾಲತ್‌ನಲ್ಲಿ ಭಾಗವಹಿಸಬಹುದು. ಸಾರ್ವಜನಿಕರು ಲೋಕ ಅದಾಲತ್ ಕುರಿತು ಹೆಚ್ಚಿನ ಪ್ರಶ್ನೆ ಮತ್ತು ಮಾಹಿತಿಗಾಗಿ ಬೇಕಾದಲ್ಲಿ ಇ-ಮೇಲ್ dlsachitradurga3@gmail.com ಹಾಗೂ ಸದಸ್ಯ ಕಾರ್ಯದರ್ಶಿಯವರ ಕಚೇರಿ ಮೊಬೈಲ್ ಸಂಖ್ಯೆ 9141193935 ಹಾಗೂ ದೂರವಾಣಿ ಸಂಖ್ಯೆ 08194- 222322 ಕ್ಕೆ ಸಹ ಸಂಪರ್ಕಿಸಬಹುದು ಎಂದು ನ್ಯಾಯಾಧೀಶ ರೋಣ ವಾಸುದೇವ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಉಪಸ್ಥಿತರಿದ್ದರು.

# ಅಪ್ರಾಪ್ತ ಬಾಲಕಿ ವಿವಾಹ ಹಾಗೂ ಬಲವಂತದ ಮದುವೆ ವಿರುದ್ದ ಜಾಗೃತಿ ಮೂಡಿಸಲು ಸೂಚನೆ: ಕೆ.ಟಿ.ತಿಪ್ಪೇಸ್ವಾಮಿ

» ಚಳ್ಳಕೆರೆ



ಕಳೆದ ಕೆಲವು ತಿಂಗಳಿನಿಂದ ತಾಲ್ಲೂಕಿನಾದ್ಯಂತ ಮಕ್ಕಳ ಮೇಲೆ ಲೈಗಿಂಕ ದೌರ್ಜನ್ಯ ಸೇರಿದಂತೆ, ಅಪ್ರಾಪ್ತ ಬಾಲಕಿಯರು ಗರ್ಭಿಣಿಯಾಗಿ ಆಸ್ಪತ್ರೆಗಳಲ್ಲಿ ಮಕ್ಕಳಿಗೆ ಜನ್ಮನೀಡಿದ ಉದಾಹರಣೆ ಸಾಕಷ್ಟಿವೆ. ಇದು ಮಕ್ಕಳ ಹಕ್ಕಗಳನ್ನು ರಕ್ಷಿಸದೆ ಕಸಿದಂತಾಗಿದೆ, ತಾಲ್ಲೂಕು ಆಡಳಿತ ಈ ನಿಟ್ಟಿನಲ್ಲಿ ಕಾನೂನು ಕ್ರಮ ಜರುಗಿಸುವಲ್ಲಿ ಹೆಚ್ಚು ಜಾಗೃತೆ ವಹಿಸಿ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಕೆ.ಟಿ.ತಿಪ್ಪೇಸ್ವಾಮಿ ತಿಳಿಸಿದರು.

ಅವರು, ಸೋಮವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಮಕ್ಕಳ ಹಕ್ಕುಗಳ ಉಲ್ಲಂಘನೆ ಕುರಿತಂತೆ ಕರೆದಿದ್ದ ಜಾಗೃತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸರ್ಕಾರ ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ಅನೇಕ ಕಾನೂನು, ನಿಯಮಗಳನ್ನು ಜಾರಿಗೆ ತಂದಿದೆ. ಬಹುತೇಕ ಪ್ರಕರಣಗಳಲ್ಲಿ ಪೋಷಕರು ಗೌರವಕ್ಕೆ ಕುಂದಾಟುಗುತ್ತದೆ ಎಂಬ ಭಾವನೆಯಿಂದ ದೂರು ನೀಡುವುದುಲ್ಲ, ಆದ್ದರಿಂದ ತಾಲ್ಲೂಕು ಆಡಳಿತ ಈ ನಿಟ್ಟಿನಲ್ಲಿ ಕ್ಷಿಪ್ರಕಾರ್ಯಚರಣೆ ನಡೆಸಿ ಇಂತಹ ಘಟನೆ ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕು. ಅಪ್ರಾಪ್ತ ಬಾಲಕಿಯರನ್ನು ವಂಚಿಸುವವರು ವಿರುದ್ಧ ಕಠಿಣಕಾನೂನು ಕ್ರಮ ಜರುಗಿಸಬೇಕೆಂದು ತಿಳಿಸಿದರು.

ತಹಶೀಲ್ದಾರ್ ರೇಹಾನ್‌ಪಾಷ ಮಾಹಿತಿ ನೀಡಿ, ಅಪ್ರಾಪ್ತ ಬಾಲಕಿ ಗರ್ಭಿಯಾಗುವುದಲ್ಲದೆ, ಮಗುವಿಗೆ ಜನ್ಮನೀಡುವ ಘಟನೆ ಸಾಕಷ್ಟಿವೆ. ಈ ಬಗ್ಗೆ ಮಾಹಿತಿ ಬಂದಕೂಡಲೇ ಇಲಾಖೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿ ಕ್ರಮಕೈಗೊಳ್ಳುವಂತೆ ಸೂಚಿಸಿದೆ. ಇತ್ತೀಚೆಗಷ್ಟ ಸುದ್ದಿಬಂದಕೂಡಲೇ ಅಪ್ರಾಪ್ತ ಬಾಲಕಿ ವಿವಾಹ ನಡೆಸುತ್ತಿದ್ದ ಪೋಷಕರ ವಿರುದ್ದ ಕ್ರಮ ಕೈಗೊಂಡಿದೆ. ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಇಂತಹ ಪ್ರಕರಣ ಮರುಕಳಿಸದಂತೆ ಎಚ್ಚರಿಕೆ ವಹಿಸಲಾಗುವುದು ಎಂದರು.

ಸಭೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಕಾರ್ಯನಿರ್ವಹಣಾಧಿಕಾರಿ ಶಶಿಧರ, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಸಿಡಿಪಿಓ ರಾಜಾನಾಯ್ಕ,ಡಿವೈಎಸ್ಪಿಟಿ.ಬಿ.ರಾಜಣ್ಣ,ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಉಪಸ್ಥಿತರಿದ್ದರು.

### ಭಗವಾನ್ ಸಾಯಿಬಾಬಾಮಂದಿರದಲ್ಲಿ 12ನೇ ವರ್ಷದ ಗುರುಪೌರ್ಣಿಮೆ



ಚಳ್ಳಕೆರೆ:ಇಲ್ಲಿನಪಾವಗಡರಸ್ತೆಯಭಗವಾನ್‌ಸಾಯಿಬಾಬಾಮಂದಿರದಲ್ಲಿ ಪ್ರತಿವರ್ಷದಂತೆ ಈ ವರ್ಷವೂ 12ನೇ ವರ್ಷದ ಗುರುಪೌರ್ಣಿಮೆ ಉತ್ಸವವನ್ನು ಆಚರಿಸಲು ನಿರ್ಧರಿಸಿದ್ದು, ಭಕ್ತಾಧಿಗಳಿಂದ ಆಹಾರ, ಧಾನ್ಯ ಸಂಗ್ರಹಿಸುವ ಭಿಕ್ಷಾಟನೆ ರಥಕ್ಕೆ ದಾಸನಾಯಕಹಟ್ಟಿಯ ವಾಲ್ಮೀಕಿ ಹರ್ಷಾನಂದಸ್ವಾಮೀಜಿ ಚಾಲನೆ ನೀಡಿದರು. ಭಗವಾನ್ ಸಾಯಿಬಾಬಾರವರಿಗೆ ತನ್ನ ಭಕ್ತರ ಮೇಲೆ ಅಪಾರವಾದ ಪ್ರೀತಿ, ಗೌರವವಿದೆ. ಸಾವಿರಾರು ದಾನಿಗಳು ಆಹಾರ ಪದಾರ್ಥವೂ ಸೇರಿದಂತೆ ಎಲ್ಲವನ್ನೂ ಗುರುಪೂರ್ಣಿಮೆ ಉತ್ಸವಕ್ಕೆ ನೀಡಿದರೂ ಸಹ ಭಕ್ತಾಧಿಗಳಿಂದ ಬಿಕ್ಷಾಟನೆ ಮೂಲಕ ಸಂಗ್ರಹಿಸಿ ಗುರುಪೂರ್ಣಿಮೆ ಉತ್ಸವ ಆಚರಿಸಬೇಕೆಂಬುವುದು ಸಾಯಿಬಾಬಾರ ಸಂಕಲ್ಪವಾಗಿದೆ. ಆದ್ದರಿಂದ ಆಹಾರ ಪದಾರ್ಥಗಳನ್ನು ಸಂಗ್ರಹಿಸುವ ರಥಕ್ಕೆ ಇಂದು ಚಾಲನೆ ನೀಡಿ ಭಕ್ತರು ತಮ್ಮ ಕಾಣಿಕೆಗಳನ್ನು ಆಹಾರ ಪದಾರ್ಥ ರೂಪದಲ್ಲಿ ನೀಡುವಂತೆ ಮನವಿ ಮಾಡಿದರು. ವೆಂಕಟಸಾಯಿಸೇವಾ ಟ್ರಸ್ಟ್‌ನ ಹಿರಿಯ ನಿರ್ದೇಶಕ ಬಿ.ಸಿ.ವೆಂಕಟೇಶಮೂರ್ತಿ, ಉಪಾಧ್ಯಕ್ಷ ಕೆ.ಎಂ.ಜಗದೀಶ್, ಕಾರ್ಯದರ್ಶಿ ರವಿಕುಮಾರ್, ಬಿ.ಸಿ.ಸತೀಶ್‌ಕುಮಾರ್, ಕಾರ್ತಿಕ್ ಎಸ್. ಮೂರ್ತಿ, ಬಿ.ವಿ.ಚಿದಾನಂದಮೂರ್ತಿ, ಹೇಮಾರೆಡ್ಡಿ, ರಾಘವೇಂದ್ರ, ರೇಣುಕಾಸ್ವಾಮಿ, ವಿಕಾಸ್, ಸಂಜಯ್, ಪ್ರೇಮ್, ತಿಪ್ಪೇಸ್ವಾಮಿ, ಸತೀಶ್, ನಾಗರಾಜು ಮುಂತಾದವರು ಉಪಸ್ಥಿತರಿದ್ದರು.



ಹಿರಿಯೂರು ತಾಲ್ಲೂಕು ಬೂತಯ್ಯನಟ್ಟಿ ಗ್ರಾಮದ ಕಿರಿಯ ಪ್ರಾಥಮಿಕ ಪಾಠಶಾಲೆಯ ಎಂಟು ಜನ ವಿದ್ಯಾರ್ಥಿಗಳು ಮೊರಾರ್ಜಿ ದೇಸಾಯಿ ಪರೀಕ್ಷೆ ಬರೆದಿದ್ದರು. ಅವರಲ್ಲಿ 8 ವಿದ್ಯಾರ್ಥಿಗಳು ಉತ್ತಮ ಅಂಕ ಪಡೆದು ಉತ್ತೀರ್ಣರಾಗಿದ್ದಾರೆ. ಆ ವಿದ್ಯಾರ್ಥಿಗಳ ಮಾರ್ಗದರ್ಶಕ ಶಿಕ್ಷಕರಾದ ಬಶೀರ್ ಅವರಿಗೆ ಗ್ರಾಮಸ್ಥರು ಸನ್ಮಾನಿಸಿ ಬೀಳ್ಕೊಟ್ಟರು.

### ಬಿಐಇಆರ್‌ಟಿ ಹುದ್ದೆಗೆ ಅರ್ಜಿ ಆಹ್ವಾನ

ಚಿತ್ರದುರ್ಗ: 2025-26ನೇ ಸಾಲಿಗೆ ಚಿತ್ರದುರ್ಗ ಜಿಲ್ಲೆಯಲ್ಲಿ ಖಾಲಿ ಇರುವ ಪ್ರಾಥಮಿಕ ಬಿಐಇಆರ್‌ಟಿ ಹುದ್ದೆಗೆ ಸ್ಪೆಷಲ್ ಡಿ.ಇಡಿ ಜೊತೆಗೆ ವ್ಯಾಲಿಡ್ ಆರ್‌ಸಿಐ ಸಿಆರ್‌ರ್ ನಂಬರ್ ಮತ್ತು ಪ್ರೌಢ ಬಿಐಇಆರ್‌ಟಿ ಹುದ್ದೆಗೆ ಬಿ.ಇಡಿ ಇನ್ ಸ್ಪೆಷಲ್ ಎಜುಕೇಷನ್ ಜೊತೆಗೆ ವ್ಯಾಲಿಡ್ ಆರ್‌ಸಿಐ ಸಿಆರ್‌ರ್ ನಂಬರ್ ಹೊಂದಿರುವ ಅರ್ಹ ಅಭ್ಯರ್ಥಿಗಳಿಂದ ನೇರಗುತ್ತಿಗೆ ಮೂಲಕ ತಾತ್ಕಾಲಿಕವಾಗಿ ಸೇವೆ ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಇದೇ ಜೂನ್ 16ರ ಸಂಜೆ 5 ಗಂಟೆ ಒಳಗೆ ಭರ್ತಿ ಮಾಡಿದ ದೃಢೀಕೃತ ದಾಖಲೆಗಳೊಂದಿಗೆ ಅರ್ಜಿಗಳನ್ನು ಮುದ್ದಾಂ ಉಪನಿರ್ದೇಶಕರು (ಆಡಳಿತ) ಹಾಗೂ ಪದನಿಮಿತ್ತ ಜಿಲ್ಲಾ ಯೋಜನಾಧಿಕಾರಿ, ಸಮಗ್ರ ಶಿಕ್ಷಣ ಕರ್ನಾಟಕ, ಶಾಲಾ ಶಿಕ್ಷಣ ಇಲಾಖೆ, ಚಿತ್ರದುರ್ಗ ಈ ಕಚೇರಿಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯಕ್ ಸಲಹೆ

# ಸೊಳ್ಳೆಯಿಂದ ಹರಡುವ ರೋಗಗಳಿಗೆ ಕಡಿವಾಣ ಹಾಕಿ

» ಚಿತ್ರದುರ್ಗ



ಸೊಳ್ಳೆ ಚಿಕ್ಕದಾದರೂ ಸಾವು ತರುವ ಸಾಧ್ಯತೆ ಇದೆ. ಸೊಳ್ಳೆಯಿಂದ ಹರಡುವ ರೋಗಗಳಿಗೆ ಕಡಿವಾಣ ಹಾಕಿ ಎಂದು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯಕ್ ಹೇಳಿದರು

ಚಿತ್ರದುರ್ಗ ನಗರದ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಡೆಂಗ್ಯೂ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಪಡಿ, ಪರಿಸರ ಸ್ವಚ್ಛತೆ ಕಾಪಾಡಿಕೊಂಡು ಡೆಂಗ್ಯೂ ಜ್ವರ ನಿಯಂತ್ರಣಕ್ಕೆ ಮತ್ತು ಲಾರ್ವಮುಕ್ತ ಸೊಳ್ಳೆಮುಕ್ತ ಶಾಲಾ ಕಾಲೇಜು ಘೋಷಣೆ ಮಾಡಲು ಸರ್ವರು ಶ್ರಮಿಸಬೇಕು ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಇದ್ದಕ್ಕಿದ್ದಂತೆ ಜ್ವರ ಬರುವುದು, ಕಣ್ಣಿನ ಹಿಂಭಾಗ ನೋವು, ಕೀಲು ಮಾಂಸಖಂಡಗಳ ನೋವು, ಹಲವರಿಗೆ ಹೊಟ್ಟೆ ನೋವು ಬರಬಹುದು, ಇವು ಡೆಂಗ್ಯೂ ಜ್ವರದ ಲಕ್ಷಣಗಳು ಡೆಂಗ್ಯೂ ಜ್ವರ ಬಂದರೆ ನಿಗದಿತವಾದ ಚಿಕಿತ್ಸೆ ಲಭ್ಯವಿಲ್ಲ. ರೋಗಲಕ್ಷಣಗಳಿಗನುಸಾರವಾಗಿ ವೈದ್ಯರು ಚಿಕಿತ್ಸೆಯನ್ನು ನೀಡುತ್ತಾರೆ. ರೋಗ ಬಾರದಂತೆ ತಡೆಯುವ ಮುಂಜಾಗ್ರತಾ ಕ್ರಮಗಳನ್ನು ಪಾಲಿಸಿ ಯಾವುದೇ ಜ್ವರ ಬರಲಿ ಸಮೀಪದ ಆರೋಗ್ಯ ಸಂಸ್ಥೆಗಳಲ್ಲಿ ರಕ್ತಪರೀಕ್ಷೆ ಮಾಡಿಸಿ ಡೆಂಗ್ಯೂ ಜ್ವರಕ್ಕೆ ತಾತ್ಸಾರ ಬೇಡ, ತಾತ್ಸಾರ ಮಾಡಿದರೆ ಸಾವು ಬರಬಹುದು ಎಂದರು.

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಗುರುಮೂರ್ತಿ ಮಾತನಾಡಿ, ಸೊಳ್ಳೆ ನಿಯಂತ್ರಣಕ್ಕೆ ಮನೆ ಮುಂದೆ ಬೇವಿನ ಹೊಗೆ ಹಾಕಿರಿ, ನಿರುಪಯುಕ್ತ ವಸ್ತುಗಳನ್ನು ದೂರವಿಲೇವಾರಿ ಮಾಡಿ ,ಮನೆಯಲ್ಲಿನ ನೀರಿನ ತಾಣಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಿ ಮನೆಯ ಮುಂದೆ ಚೆಂಡು ಹೂವು, ಸೇವಂತಿಗೆ ಬೆಳೆಸಿ ಸೊಳ್ಳೆಗಳನ್ನು ನಿಯಂತ್ರಿಸಿ ಎಂದರು.

ಆರೋಗ್ಯ ನಿರೀಕ್ಷಣಾಧಿಕಾರಿ ಗಂಗಾಧರ್ ರೆಡ್ಡಿ ಮಾತನಾಡಿ, ಆರೋಗ್ಯ ಇಲಾಖೆ ಅಧಿಕಾರಿಗಳು, ಆಶಾ ಕಾರ್ಯಕರ್ತರು ಮನೆಬಾಗಿಲಿಗೆ ಬಂದಾಗ ಸಹಕರಿಸಿರಿ, ಸೊಳ್ಳೆಗಳ ನಿಯಂತ್ರಣಕ್ಕೆ ಗಪ್ಪಿ ಗಂಬ್ಯೂಸಿಯ ಮೀನುಗಳನ್ನು ಆರೋಗ್ಯ ಇಲಾಖೆ ಸಿಬ್ಬಂದಿಯವರು ಆಯ್ದ ನೀರಿನ ತಾಣಗಳಿಗೆ ಬಿಡಲಾಗುತ್ತಿದ್ದು, ಈ ಮೀನುಗಳು ಸೊಳ್ಳೆ ಮರಿಗಳನ್ನು ತಿನ್ನುತ್ತವೆ. ಸೊಳ್ಳೆ ಬ್ಯಾಟ್ ಉಪಯೋಗ ಸೊಳ್ಳೆ ನಿರೋಧಕಗಳ ಬಳಕೆ ಮಾಡುವುದರಿಂದ ಸೊಳ್ಳೆ ನಿಯಂತ್ರಣವೂ ಕೂಡ ಸಾಧ್ಯ ಎಂದರು. ಈ ವೇಳೆ ವಿದ್ಯಾರ್ಥಿಗಳಿಗೆ ಗಪ್ಪಿ ಗಂಬೂಸಿಯಾ ಮೀನುಗಳು ಮತ್ತು ಲಾರ್ವ ಪ್ರದರ್ಶನ ಮಾಡಲಾಯಿತು. ಈ ಸಂದರ್ಭದಲ್ಲಿ ಕಾಲೇಜು ಪ್ರಾಂಶುಪಾಲರಾದ ಸಣ್ಣ ಪಾಲಯ್ಯ ಮತ್ತು ಉಪನ್ಯಾಸಕ ವೃಂದದವರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.



# ಸಂಸ್ಕೃತ ಭಾಷೆಯನ್ನು ಕೊಲ್ಲುವುದು ಬೇಡ

## ಸಂಸ್ಕೃತ ಭಾಷೆ ಮಾಡಿದ ಅನ್ಯಾಯವನ್ನು ಮರೆಯುವುದು ಬೇಡ.....

## ಸಮಗ್ರ ಚಿಂತನೆಯ ಮೂಲಕ ಪರಿವರ್ತನೆಯ ಪರ್ಯಾಯ ಮಾರ್ಗ ಹುಡುಕೋಣ......



ಸಂಸ್ಕೃತ ಒಂದು ಪ್ರಾಚೀನ ಭಾಷೆ. ಈ ಕ್ಷಣದಲ್ಲಿ ಅದನ್ನು ಚಲಾವಣೆಯಲ್ಲಿ ಇಲ್ಲದ ಮೃತ ಭಾಷೆ ಎಂದೂ ಕೆಲವರು ಹೇಳುತ್ತಾರೆ. ಏನೇ ಆಗಲಿ ಒಂದು ಭಾಷೆ ನಮ್ಮ ಸಂಸ್ಕೃತಿಯ ಅವಿಭಾಜ್ಯ ಅಂಗ. ಅದನ್ನು ಉಳಿಸುವ ಸಾಧ್ಯತೆ ಇದ್ದರೆ ಖಂಡಿತ ಪರಿಶೀಲಿಸೋಣ ಮತ್ತು ಪ್ರಯತ್ನಿಸೋಣ.....

ಆದರೆ ಸಂಸ್ಕೃತ ಭಾಷೆಯ ಉತ್ತುಂಗದಲ್ಲಿ ಆ ಭಾಷೆಯು ( ಆಗಿನ ಸಮಕಾಲೀನ ಜನರು ) ಮಾಡಿದ ಅಮಾನವೀಯ ಅನ್ಯಾಯವು ಸದಾ ಕಾಡುತ್ತಿರುತ್ತದೆ.

ಶಿಕ್ಷಣವನ್ನು ಕೇವಲ ಕೆಲವೇ ಜನರ ಸ್ವತ್ತಾಗಿಸಿ ಅದನ್ನು ಸಂಸ್ಕೃತ ಭಾಷೆಯ ಕಟ್ಟಲೆಯಲ್ಲಿ ಬಂಧಿಸಿ ಅನೇಕ ಸಮುದಾಯಗಳನ್ನು ಅತ್ಯಂತ ಅಮಾನುಷವಾಗಿ ಶೋಷಿಸಿದ ಇತಿಹಾಸ ಸಂಸ್ಕೃತ ಭಾಷೆಗಿದೆ. ಅಂದರೆ ನೇರವಾಗಿ ಸಂಸ್ಕೃತ ಭಾಷೆಯಲ್ಲ ಬದಲಾಗಿ ಆಗ ಅದನ್ನು ಕಲಿತು ಉಪಯೋಗಿಸುತ್ತಿದ್ದ ಜನರಿಗೆ ಇದು ಅನ್ವಯಿಸುತ್ತದೆ. ಸಂಸ್ಕೃತ ಪಂಡಿತರು ಅಥವಾ ಸಂಸ್ಕೃತ ಭಾಷೆಯ ಅಧ್ಯಯನಕಾರರು ಕನ್ನಡ ಭಾಷೆಯನ್ನು ಎರಡನೇ ದರ್ಜೆ ಅಥವಾ ಅನಕ್ಷರಸ್ಥ ಬಡವರ ಭಾಷೆ ಎಂಬುದಾಗಿ ಕೀಳಾಗಿ ಕಂಡ ಉದಾಹರಣೆಗಳು ಅವರ ವರ್ತನೆಯಲ್ಲಿ ಕಾಣಬಹುದಿತ್ತು. ಅಂದರೆ ಸಂಸ್ಕೃತ ಬಲ್ಲವನು ಮಾತ್ರ ಜ್ಞಾನಿ ಎಂಬ ಅಭಿಪ್ರಾಯ ಅಥವಾ ಭ್ರಮೆ.

ಸಾಮಾನ್ಯ ಜನರಿಗೆ ಕಬ್ಬಿಣದ ಕಡಲೆಯಾಗಿಸಿ ಅವರ ಅನಕ್ಷರಸ್ಥ ಸ್ಥಿತಿಯನ್ನು ದುರುಪಯೋಗ ಪಡಿಸಿಕೊಂಡು ದಬ್ಬಾಳಿಕೆ ಮಾಡಿದ ಸಾಮಾಜಿಕ ಶೈಕ್ಷಣಿಕ ವ್ಯವಸ್ಥೆಗೆ ಸಂಸ್ಕೃತ ಭಾಷೆ ಅಥವಾ ಅದನ್ನು ಬಳಸುವವರು ಸಾಕ್ಷಿಯಾಗಿದ್ದಾರೆ.

ಆದರೆ ಒಂದು ಭಾಷೆಯಾಗಿ ಸಂಸ್ಕೃತ ಒಂದು ಮಹತ್ವದ ಮಾಹಿತಿಯ ಕಣಜ. ಭಾಷೆಯ ದೃಷ್ಟಿಯಿಂದ ಸಾಹಿತ್ಯದ ಆಧಾರದಲ್ಲಿ ಸಂಸ್ಕೃತ ಶ್ರೇಷ್ಠತೆಯ ಸಾಲಿನಲ್ಲಿ ನಿಲ್ಲುವ ಎಲ್ಲಾ ಅರ್ಹತೆ ಹೊಂದಿದೆ. ಐತಿಹಾಸಿಕ ಮಹತ್ವ ಪಡೆದಿದೆ.

ಈ ಹಿನ್ನೆಲೆಯಲ್ಲಿ ಈಗಿನ ಸಂಸ್ಕೃತ ಭಾಷೆಯ ಬಗೆಗಿನ ವಿವಾದವನ್ನು ನೋಡಬೇಕಿದೆ........

ಭಾಷೆ ಎಂಬುದು ಒಂದು ಸಂವಹನ ಮಾಧ್ಯಮ. ಅದರಲ್ಲಿ ಯಾವುದೇ ಹೆಚ್ಚುಗಾರಿಕೆ ಯಾವುದೇ ಭಾಷೆಗೆ ಇಲ್ಲ. ಆದರೆ ವ್ಯಾವಹಾರಿಕ ದೃಷ್ಟಿಯಿಂದ ಜನಪ್ರಿಯತೆ ಮತ್ತು ಸಂಖ್ಯೆಗಳ ಆಧಾರದಲ್ಲಿ ಕೆಲವು ಭಾಷೆಗಳು ಹೆಚ್ಚು ಪ್ರಾಮುಖ್ಯತೆ ಪಡೆದಿದೆ ಮತ್ತು ಭಾಷೆಗಳು ಮನುಷ್ಯ ಜೀವನದ ಅವಿಭಾಜ್ಯ ಅಂಗಗಳೇ ಆಗಿವೆ.

ಭಾರತ ದೇಶದಲ್ಲಿ ಭಾಷೆಗಳ ಆಧಾರದ ಮೇಲೆಯೇ ಪ್ರದೇಶಗಳನ್ನು ವಿಂಗಡಿಸಲಾಗಿದೆ ಮತ್ತು ಭಾಷೆಗಳು ಇಲ್ಲಿನ ಜನರ ನಡುವೆ ಭಾವನಾತ್ಮಕ ಸಂಬಂಧವನ್ನು ಹೊಂದಿವೆ. ಆದರೆ ಸಂಸ್ಕೃತ ಯಾವುದೇ ರಾಜ್ಯದ ಮಾತೃಭಾಷೆಯಾಗಿ ಉಳಿದಿಲ್ಲ.

ಈ ಸಂದರ್ಭದಲ್ಲಿ ಕರ್ನಾಟಕ ಸರ್ಕಾರ ರಾಮನಗರ ಜಿಲ್ಲೆಯಲ್ಲಿ ಮಾಗಡಿ ತಾಲ್ಲೂಕಿನ ಬಳಿ ಸುಮಾರು 100 ಎಕರೆ ಜಮೀನಿನಲ್ಲಿ 359 ಕೋಟಿ ವೆಚ್ಚದಲ್ಲಿ ಬೃಹತ್ ಸಂಸ್ಕೃತ ವಿಶ್ವವಿದ್ಯಾಲಯ ಸ್ಥಾಪನೆಗೆ ಅನುಮತಿ ನೀಡಿದೆ.

ಸಾಂಪ್ರದಾಯಕ ಮನೋಭಾವದ ಬಲಪಂಥೀಯ ಚಿಂತನೆಯ ವ್ಯಕ್ತಿಗಳು ಇದನ್ನು ಅತ್ಯಂತ ಸಂತೋಷದಿಂದ ಸ್ವಾಗತಿಸಿದರೆ, ಪ್ರಗತಿಪರರು ಕನ್ನಡ ಹೋರಾಟಗಾರರು ಇದನ್ನು ಬಲವಾಗಿ ವಿರೋಧಿಸುತ್ತಿದ್ದಾರೆ.

ಸ್ವಾಗತಿಸುವವರು ಉರ್ದು ಇಂಗ್ಲೀಷ್ ಮುಂತಾದ ಭಾಷೆಗಳಿಗೆ ಬಹುದೊಡ್ಡ ಪ್ರೋತ್ಸಾಹ ಸಿಗುತ್ತಿರುವಾಗ ಭಾರತೀಯ ಮೂಲದ ಅನೇಕ ಭಾಷೆಗಳ ಹುಟ್ಟಿಗೆ ಕಾರಣವಾದ ಸಂಸ್ಕೃತ ಭಾಷೆಗೆ ವಿರೋಧ ಅಕ್ಷಮ್ಯ ಜೊತೆಗೆ ವಿಷಯ ಏನೇ ಇರಲಿ ಒಂದು ಭಾಷೆಯನ್ನು ಕೊಲ್ಲುವುದು ಅಥವಾ ದ್ವೇಷಿಸಿವುದು ಯಾವ ನ್ಯಾಯ ಎನ್ನುವ ವಾದ ಮಂಡಿಸುತ್ತಾರೆ.

ವಿರೋಧಿಸುವವರು ಮುಖ್ಯವಾಗಿ ಸಂಸ್ಕೃತ ಭಾಷೆಯ ಅಭಿವೃದ್ಧಿ ಕನ್ನಡಕ್ಕೆ ಅಪಾಯ ಮತ್ತು ಸಂಸ್ಕೃತ ಭಾಷೆಯ ಮುಖಾಂತರ ಮತ್ತೆ ವೇದ ಕಾಲದ ಶೋಷಣೆಯ ಸಾಮಾಜಿಕ ವ್ಯವಸ್ಥೆ ಪುನರ್ ಸ್ಥಾಪನೆಗೊಳ್ಳಬಹುದು ಎಂಬ ಆತಂಕ ಮತ್ತಿತರ ಅಂಶಗಳ ಬಗ್ಗೆ ಗಮನ ಸೆಳೆಯುತ್ತಾರೆ.

ವಾಸ್ತವವಾಗಿ ಮತ್ತು ಮುಕ್ತವಾಗಿ ಕೆಲವು ವಿಷಯಗಳನ್ನು ಪರಿಶೀಲಿಸೋಣ........

ಮೊದಲನೆಯದಾಗಿ ಕೋವಿಡ್ ಸಂಕಷ್ಟದ ಸಮಯದಲ್ಲಿ ಹಣದ ಅವಶ್ಯಕತೆ ತುಂಬಾ ಇರುವಾಗ ಮನುಷ್ಯನ ಆರೋಗ್ಯಕ್ಕೆ ಅತಿಹೆಚ್ಚು ಕಾಳಜಿ ವಹಿಸಬೇಕಾದ ಸಮಯದಲ್ಲಿ ಸರ್ಕಾರದ ಈ ಬೃಹತ್ ಯೋಜನೆ ಖಂಡಿತ ಅನವಶ್ಯಕ. ಸಂಸ್ಕೃತ ಭಾಷೆಯ ಉಳಿವಿಗಾಗಿ ಮತ್ತು ಬೆಳವಣಿಗೆಗಾಗಿ ಈಗಿರುವ ಸೌಕರ್ಯಗಳನ್ನೇ ಮತ್ತಷ್ಟು ವಿಸ್ತಾರಗೊಳಿಸಿ ಒಂದಷ್ಟು ಸಾಮಾನ್ಯ ಕ್ರಮ ಕೈಗೊಳ್ಳಬಹುದಿತ್ತು.

ಎರಡನೆಯದಾಗಿ ತುಳು ಕೊಡುವ ಬ್ಯಾರಿ ಕೊಂಕಣಿ ಅರೆ ಭಾಷೆ ಮುಂತಾದ ಸ್ಥಳೀಯ ಭಾಷೆಗಳನ್ನು ಪರಿಗಣಿಸಿದಾಗ ಸಂಸ್ಕೃತಕ್ಕೆ ಇಷ್ಟೊಂದು ಮಹತ್ವದ ಅವಶ್ಯಕತೆ ಇರಲಿಲ್ಲ. ಏಕೆಂದರೆ ಅದನ್ನು ಮಾತನಾಡುವವರ ಸಂಖ್ಯೆ ತುಂಬಾ ಕಡಿಮೆ ಮತ್ತು ದೇಶದ ಇತರ ಭಾಗಗಳಲ್ಲಿ ಸಹ ಅದನ್ನು ಬೆಳೆಸುವ ಕೆಲಸ ನಡೆಯುತ್ತಿದೆ.

ಮೂರನೆಯದಾಗಿ, ಕರ್ನಾಟಕದಲ್ಲಿ ಕನ್ನಡವೇ ತಾಯಿಭಾಷೆ. ಅಲ್ಲದೇ ಇಲ್ಲಿನ ಮತ್ತೆ ಕೆಲವು ಉಪ ಭಾಷೆಗಳು ಈಗಲೂ ಜನರ ನಡುವೆ ಇರುವುದರಿಂದ ಅದಕ್ಕೆ ಇಲ್ಲದ ಮಹತ್ವ ಸಂಸ್ಕೃತಕ್ಕೆ ಕೊಡುವುದು ಉಚಿತವಲ್ಲ.

ಹಿಂದಿ ಹೇರಿಕೆ, ಇಂಗ್ಲೀಷ್ ಜನಪ್ರಿಯತೆಯ ನಡುವೆ ಕನ್ನಡ ಭಾಷೆ ನಲುಗುತ್ತಿರುವಾಗ ಕನ್ನಡ ಭಾಷೆಯ ಅಭಿವೃದ್ಧಿಗೆ ಹೆಚ್ಚಿನ ಮಹತ್ವ ಕೊಡಬೇಕಾದ ಜವಾಬ್ದಾರಿ ಸರ್ಕಾರದ್ದು.

ಹೆಚ್ಚಿನ ಹಣವನ್ನು ಈ ನಿಟ್ಟಿನಲ್ಲಿ ಉಪಯೋಗಿಸಬೇಕಿದೆ.

ಕನ್ನಡ ಸಾಹಿತ್ಯ ಪರಿಷತ್ತು, ಹಂಪಿ ಕನ್ನಡ ವಿಶ್ವವಿದ್ಯಾಲಯ, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಅಧ್ಯಯನ ಕೇಂದ್ರ ಮುಂತಾದ ಸಂಸ್ಥೆಗಳಿಗೆ ಹಣದ ಕೊರತೆಯಾಗದಂತೆ ನೋಡಿಕೊಳ್ಳಬೇಕಿದೆ.

ನಾಲ್ಕನೆಯದಾಗಿ, ಒಂದು ವೇಳೆ ಸಂಸ್ಕೃತ ಸಹಜವಾಗಿಯೇ ಜನರಲ್ಲಿ ಹೆಚ್ಚು ಜನಪ್ರಿಯವಾಗತೊಡಗಿದರೆ ಆಗ ಸರ್ಕಾರ ಈ ನಿರ್ಧಾರವನ್ನು ಮತ್ತೊಮ್ಮೆ ಪರಿಶೀಲಿಸಬಹುದು.

ಈಗ ಆ ವಾತಾವರಣ ಇಲ್ಲ.

ಐದನೆಯದಾಗಿ, ಕೇವಲ ಸಂಸ್ಕೃತ ಭಾಷೆ ಮಾತ್ರವಲ್ಲ ಅದರ ಉಚ್ರಾಯ ಸ್ಥಿತಿಯಲ್ಲಿ ಇದ್ದಂತ ಶೋಷಣಾ ಸಂಸ್ಕೃತಿ ಈ ಮೂಲಕ ಮತ್ತೆ ತಲೆ ಎತ್ತಬಹುದು ಎಂಬ ಆತಂಕವೂ ಇದನ್ನು ವಿರೋಧಿಸುವವರಿಗೆ ಇದೆ. ಸರ್ಕಾರ ಸಾಮಾನ್ಯ ಜನರ ಭಾವನೆಗಳನ್ನು ಗಮನಿಸಬೇಕು.

ಆರನೆಯದಾಗಿ, ಈಗಾಗಲೇ ಸಂಸ್ಕೃತ ಭಾಷೆಯ ಅಭಿವೃದ್ಧಿಗೆ ಇರುವ ವ್ಯವಸ್ಥೆಯನ್ನು ಜೊತೆಗೆ ಇತರ ಸ್ಥಳೀಯ ಭಾಷೆಗಳ ಅಭಿವೃದ್ಧಿಯ ಜೊತೆಗೆ ಸಮೀಕರಿಸಿ ಸಹಜ ಪ್ರಯತ್ನಗಳು ಸಾಗಲಿ. ಯಾವುದೇ ಭಾಷೆಯನ್ನು ನಾಶವಾಗಲು ಬಿಡಬಾರದು. ಆದರೆ ತಾಯಿ ಭಾಷೆ ಕನ್ನಡವೇ ಆತಂಕದಲ್ಲಿರುವಾಗ ಇನ್ನೊಂದು ಭಾಷೆಗೆ ಇಷ್ಟೊಂದು ಮಹತ್ವ ಕೊಡುವುದು ಖಂಡಿತ ಅನ್ಯಾಯ.....

ಇದು ಸರಳ ಸಹಜ ಅಭಿಪ್ರಾಯ. ಇನ್ನಷ್ಟು ಅಂಶಗಳು ಇದನ್ನು ಆಳವಾಗಿ ಅಧ್ಯಯನ ಮಾಡಿರುವ ಭಾಷಾ ತಜ್ಞರು ಮಂಡಿಸಲು ಸ್ವಾಗತಿಸುತ್ತಾ.....






■ ಲೇಖನ
ವಿವೇಕಾನಂದ. ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T